ಸಂಪಾದಕರು: ದರ್ಶನ್.ಟಿ
Editor : DARSHAN.T

# ನಮ್ಮ ಜನ
# NAMMA JANA

ಕನ್ನಡ ದಿನ ಪತ್ರಿಕೆ
Kannada Daily

ಸಂಪುಟ – 01 ಸಂಚಿಕೆ – 38 ಶೀರ್ಷಿಕೆ ಕೋಡ್: ಕೆಎಆರ್ ಕೆಎಎನ್ 28269 ಚಿತ್ರದುರ್ಗ ದಿನಾಂಕ : 14–08–2023 ಸೋಮವಾರ ಪುಟ: 4 ಬೆಲೆ : ರೂ.2–00
Volume - 01 Issue - 38 Title- Code: KARKAN 28269 Chitradurga Date : 14-08-2023 Monday Page: 4 Price: Rs. 2-00



ಒಳ ಪುಟದ ಸುದ್ದಿಗಳು
2 ಯಾರು ಸಹ ಆತಂಕ ಭಯಪಡುವ ಅಗತ್ಯವಿಲ್ಲ ಶಾಸಕ ಟಿ.ರಘುಮೂರ್ತಿ
3 ಬುದ್ದ ಚಿಂತನೆ ಜಾತಿ ಮತ್ತು ಭ್ರಷ್ಟಾಚಾರ ಮುಕ್ತ ಸಮಾಜ ಸಾಧ್ಯ ಹೆಚ್.ಆಂಜನೇಯ
4 ನೀರು ಮತ್ತು ಸ್ವಚ್ಛತೆ ಕುರಿತು ಜನಜಾಗೃತಿ ಸಪ್ತಾಹ : ದಿವ್ಯ ಪ್ರಭು



ಸುದ್ಧಿ ಹಾಗೂ ಜಾಹೀರಾತಿಗಾಗಿ ಸಂಪರ್ಕಿಸಿ :
nammajananews@gmail.com
ವಾಟ್ಸ್‌ಅಪ್ ನಂ. 9686622252


## ಫಾಸ್ಟ್ ನ್ಯೂಸ್

## ಮನೆ ಮನೆಗಳ ಮೇಲೆ ಹಾರಾಡಲಿ ರಾಷ್ಟ್ರಧ್ವಜ : ಜಿಲ್ಲಾಧಿಕಾರಿ ದಿವ್ಯಪ್ರಭು

**ಚಿತ್ರದುರ್ಗ** : ಭಾರತ ಸ್ವಾತಂತ್ರ್ಯದ ಅಮೃತ ಮಹೋತ್ಸವ ನಿಮಿತ್ತ ಸರ್ಕಾರದ ಸೂಚನೆಯಂತೆ ಹರ್ ಘರ್ ತಿರಂಗಾ ಅಭಿಯಾನವನ್ನು ಹಮ್ಮಿಕೊಳ್ಳಲಾಗಿದ್ದು, ಇದರ ಅಂಗವಾಗಿ ಆ. 13 ರಿಂದ 15 ರವರೆಗೆ ಮೂರು ದಿನಗಳ ಕಾಲ ಜಿಲ್ಲೆಯ ಪ್ರತಿಯೊಬ್ಬರ ಮನೆ ಮನೆಗಳ ಮೇಲೆ ಭಾರತದ ರಾಷ್ಟ್ರಧ್ವಜ ಹಾರಿಸುವ ಮೂಲಕ ಪ್ರತಿಯೊಬ್ಬರಲ್ಲೂ ದೇಶಪ್ರೇಮ ಮೂಡಿಸುವಂತಾಗಬೇಕು ಎಂದು ಜಿಲ್ಲಾಧಿಕಾರಿ ದಿವ್ಯಪ್ರಭು ಜಿ.ಆರ್.ಜೆ. ಅವರು ಮನವಿ ಮಾಡಿದ್ದಾರೆ.

ಸ್ವಾತಂತ್ರ್ಯದ ಅಮೃತ ಮಹೋತ್ಸವದ ಅಂಗವಾಗಿ ರಾಜ್ಯಾದ್ಯಂತ ಇದೇ ಆ. 13 ರಿಂದ 15 ರವರೆಗೆ ಹರ್ ಘರ್ ತಿರಂಗಾ ಅಭಿಯಾನವನ್ನು ಆಯೋಜಿಸಲಾಗಿದೆ. ಈ ಅವಧಿಯಲ್ಲಿ ಎಲ್ಲ ಸರ್ಕಾರಿ ಕಚೇರಿಗಳು, ಸಾರ್ವಜನಿಕ ಉದ್ಯಮಗಳು, ಸಾರ್ವಜನಿಕ ಸ್ಥಳಗಳು, ಸಂಘ ಸಂಸ್ಥೆಗಳಲ್ಲಿ ರಾಷ್ಟ್ರ ಧ್ವಜಾರೋಹಣ ಮಾಡುವುದು ಸೇರಿದಂತೆ ಸಾರ್ವಜನಿಕರೂ ಸಹ ಸ್ವಯಂ ಪ್ರೇರಿತವಾಗಿ ಭಾಗವಹಿಸಿ, ತಮ್ಮ ತಮ್ಮ ಮನೆಗಳ ಮೇಲೆ ರಾಷ್ಟ್ರಧ್ವಜ ಹಾರಿಸುವ ಮೂಲಕ ಅಭಿಯಾನವನ್ನು ಯಶಸ್ವಿಗೊಳಿಸಬೇಕು. ಆಗಸ್ಟ್ 13 ರಿಂದ 15 ರವರೆಗೆ ಮೂರು ದಿನ ಎಲ್ಲರ ಮನೆ ಮನೆಗಳ ಮೇಲೆ, ಸರ್ಕಾರಿ, ಅರೆ ಸರ್ಕಾರಿ ಕಚೇರಿಗಳು, ಶಾಲಾ ಕಾಲೇಜುಗಳು, ಸಾರ್ವಜನಿಕ ಸ್ಥಳಗಳಲ್ಲಿ ಧ್ವಜ ಶಿಷ್ಟಾಚಾರವನ್ನು ಚಾಚು ತಪ್ಪದೆ ಪಾಲನೆ ಮಾಡಿ, ಬೆಳಿಗ್ಗೆ 06 ರಿಂದ ಸಂಜೆ 06 ಗಂಟೆಯವರೆಗೆ ರಾಷ್ಟ್ರಧ್ವಜ ಹಾರಿಸಬೇಕು ಎಂದು ತಿಳಿಸಿದ್ದಾರೆ.

ಎಲ್ಲರಿಗೂ ಸುಲಭವಾಗಿ ರಾಷ್ಟ್ರಧ್ವಜ ಲಭ್ಯವಾಗುವಂತೆ ಮಾಡಲು ಅಗತ್ಯ ಪ್ರಮಾಣದ ರಾಷ್ಟ್ರ ಧ್ವಜಗಳನ್ನು ನಗರದ ತ.ರಾ.ಸು. ರಂಗಮಂದಿರ ಆವರಣದಲ್ಲಿರುವ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಕಚೇರಿಯಲ್ಲಿ ದಾಸ್ತಾನು ಮಾಡಿ, ಇದೇ ಕಚೇರಿಯಲ್ಲಿ ವಿತರಿಸಲಾಗುತ್ತಿದ್ದು, ಪ್ರತಿಯೊಬ್ಬರಲ್ಲೂ ದೇಶಪ್ರೇಮ ಮೂಡುವಲ್ಲಿ, ಅತ್ಯಂತ ಪರಿಣಾಮಕಾರಿಯಾಗಲಿದ್ದು, ಪ್ರತಿಯೊಬ್ಬರೂ ಇದರಲ್ಲಿ ಭಾಗವಹಿಸಬೇಕು. ಎಲ್ಲ ಇಲಾಖೆಗಳ ಅಧಿಕಾರಿ, ಸಿಬ್ಬಂದಿಗಳು ಅಭಿಯಾನದಲ್ಲಿ ಪಾಲ್ಗೊಂಡು ತಮ್ಮ ತಮ್ಮ ಮನೆಯಲ್ಲಿ ರಾಷ್ಟ್ರಧ್ವಜಾರೋಹಣ ಮಾಡಬೇಕು. ಜಿಲ್ಲೆಯಲ್ಲಿ ಈ ಅಭಿಯಾನವನ್ನು ಅಭೂತಪೂರ್ವವಾಗಿ ಯಶಸ್ವಿಗೊಳಿಸಬೇಕು ಎಂದು ಜಿಲ್ಲಾಧಿಕಾರಿ ದಿವ್ಯಪ್ರಭು ಅವರು ಮನವಿ ಮಾಡಿದ್ದಾರೆ.

# ನಿಮ್ಮ ಜೊತೆ ನಾನಿದ್ದೇನೆ ಆತಂಕ ಬೇಡ

## ಅಸ್ವಸ್ಥ ರೋಗಿಗಳ ಆರೋಗ್ಯವಿಚಾರಸಿದ ಶಾಸಕ ಟಿ.ರಘುಮೂರ್ತಿ

**ಚಿತ್ರದುರ್ಗ** : ಯಾರು ಸಹ ಆತಂಕ ಭಯಪಡುವ ಅಗತ್ಯವಿಲ್ಲ, ಮುಂಜಾಗ್ರತೆ ಚಿಕಿತ್ಸೆಗೆ ಎಲ್ಲಾ ಸಿದ್ದ ತೆ ನಡೆಸಲಾಗಿದ್ದು , ಆರೋಗ್ಯದಲ್ಲಿ ಏರುಪೇರು ಕಂಡರೆ ಕೂಡಲೇ ಆರೋಗ್ಯ ತಪಾಸಣೆ ಮಾಡಿಸಿಕೊಳ್ಳಿ ಎಂದು ಶಾಸಕ ಟಿ.ರಘುಮೂರ್ತಿ ಜನರಿಗೆ ಸಲಹೆ ನೀಡಿದರು.

ಚಿತ್ರದುರ್ಗ ತಾಲೂಕು ಚಳ್ಳಕೆರೆ ವಿಧಾನ ಸಭಾ ಕ್ಷೇತ್ರ ವ್ಯಾಪ್ತಿಯ ಮುದ್ದಾಪುರ ಹೊಸಹಟ್ಟಿ ಗ್ರಾಮದಲ್ಲಿ ಜನರಿಗೆ ಕಲುಷಿತ ನೀರು ಸೇವನೆಯಿಂದ ಆಗಿರುವ ವಾಂತಿಭೇದಿ ಪ್ರಕರಣ ಕಂಡು ಬಂದು ಹಿನ್ನಲೆಯಲ್ಲಿ ಶಾಸಕ ಟಿ.ರಘುಮೂರ್ತಿ ಅವರು ಮುದ್ದಾಪುರ ಹೊಸಕಟ್ಟಿ ಗ್ರಾಮ, ಬಸವೇಶ್ವರ ಆಸ್ಪತ್ರೆ, ಜಿಲ್ಲಾ ಆಸ್ಪತ್ರೆಗೆ ಭೇಟಿ ನೀಡಿ ದಾಖಲಾಗಿರುವ ರೋಗಿಗಳ ಆರೋಗ್ಯ ವಿಚಾರಿಸಿ ಮಾಧ್ಯಮದವರ ಜೊತೆ ಮಾತನಾಡಿದರು.

ಮುದ್ದಾಪುರ ಹೊಸಹಟ್ಟಿ ಗ್ರಾಮದಲ್ಲಿ ವಾಂತಿಭೇದಿ ಪ್ರಕರಣಗಳು ಕಂಡು ಬಂದಿದ್ದ ಹಿನ್ನಲೆಯಲ್ಲಿ ಹೊಸಹಟ್ಟಿ ಗ್ರಾಮದಲ್ಲಿ ಎರಡು ದಿನದಿಂದ ಆರೋಗ್ಯ ಕ್ಯಾಂಪ್ ಮಾಡಿದ್ದು ಆರೋಗ್ಯದಲ್ಲಿ ವ್ಯತ್ಯಾಸವಾದ ಕಾರಣ ಪ್ರಾಥಮಿಕ ಚಿಕಿತ್ಸೆಗೆ ಶಾಲೆಯಲ್ಲಿ ವ್ಯವಸ್ಥೆ ಮಾಡಿ ಒಬ್ಬರು ಡಾಕ್ಟರ್, ಒಬ್ಬರು ಸಮುದಾಯ ಆರೋಗ್ಯ ಅಧಿಕಾರಿ, ಇಬ್ಬರು ಸ್ಟಾಫ್ ನರ್ಸ್, 24 7 ಅಂಬುಲೆನ್ಸ್ ವ್ಯವಸ್ಥೆಯನ್ನು ಹೊಸಹಟ್ಟಿಯಲ್ಲಿ ಆರೋಗ್ಯ ಇಲಾಖೆಯಿಂದ ಮಾಡಲಾಗಿದೆ. ಆಸ್ಪತ್ರೆಗೆ

ದಾಖಲಾಗಿರುವ ಎಲ್ಲಾ ರೋಗಿಗಳ ಆರೋಗ್ಯ ಸ್ಥಿರವಾಗಿದೆ. ಜಿಲ್ಲಾ ಆಸ್ಪತ್ರೆಯಲ್ಲಿ 8 ಜನ , ಬಸವೇಶ್ವರ ಆಸ್ಪತ್ರೆಯಲ್ಲಿ 1 , ಹೊಸಹಟ್ಟಿಯಲ್ಲಿ 2 ಜನರು ಚಿಕಿತ್ಸೆ ಪಡೆಯುತ್ತಿದ್ದು ಎಲ್ಲಾರ ಆರೋಗ್ಯ ವಿಚಾರಿಸಿದ್ದು ಎಲ್ಲಾ ಚೇತರಿಕೆ ಕಂಡಿದ್ದು ಯಾವುದೇ ತೊಂದರೆ ಇಲ್ಲ ಎಂದು ಡಿಹೆಚ್‌ಓ ಮಾಹಿತಿ ನೀಡಿದ್ದಾರೆ ಎಂದರು.



ಇಓ ಮತ್ತು ಪಿಡಿಓ ಅವರಿಗೆ ನೀರಿನ ವ್ಯವಸ್ಥೆ ಪರಿಶೀಲಿಸಲು ಸೂಚನೆ: ಹೊಸಹಟ್ಟಿ ಗ್ರಾಮದಲ್ಲಿ ಎಲ್ಲಾ ತೊಟ್ಟಿಗಳು ಮತ್ತು ಪೈಪ್ ಲೈನ್ ಎಲ್ಲಿಯಾದರೂ ಡ್ಯಾಮೇಜ್ ಆಗಿದೆಯಾ ಎಂದು ಪರಿಶೀಲನೆ ನಡೆಸಬೇಕು. ಒಂದು ವೇಳೆ ನೀರು ಸರಬರಾಜಿನಲ್ಲಿ ತೊಂದ–ರೆ ಆಗಿದ್ದರೆ ಸರಿಪಡಿಸಬೇಕು. ಗ್ರಾಮದಲ್ಲಿ ಸ್ವಚ್ಛತೆ ಕಾಪಡಬೇಕು. ಜನರ ಜೊತೆ ಇದ್ದು ಸಹಕಾರ ನೀಡಿ ಏನೇ ಇದ್ದರು ನನ್ನ ಗಮನಕ್ಕೆ ತನ್ನಿ ಎಂದು ಸೂಚನೆ ನೀಡಿದರು.



ಡಿಹೆಚ್‌ಓ ಮತ್ತು ಟಿಹೆಚ್ ಓ ಅವರಿಂದ ಮಾಹಿತಿ ಪಡೆದಿದ್ದು ಪ್ರಕರಣಗಳು ತುಂಬಾ ಗಂಭೀರತೆ ಇಲ್ಲ. ಗುಣಮುಖರಾಗುತ್ತಿದ್ದಾರೆ. ಆತಂಕ ಬೇಡ , ಬಿಸಿ ಆಹಾರ, ಬಿಸಿನೀರು ಸೇವಿಸಬೇಕು ಎಂದು ಜನರಿಗೆ ತಿಳಿಸಿದ್ದೇವೆ ಎಂದಿದ್ದಾರೆ.ಪ್ರಕರಣ ಹೆಚ್ಚು ಆಗದಂತೆ ಸೂಕ್ತ ಮುಂಜಾಗ್ರತೆ ಕ್ರಮ ವಹಸಲಾಗಿದ್ದು ಎಂದು ತಿಳಿಸಿದ್ದು ಜನರು ಆರೋಗ್ಯ ಇಲಾಖೆಯ ಸಲಹೆ ಸೂಚನೆಗಳು ಪಾಲನೆ ಮಾಡಬೇಕು ಎಂದರು.

ಎಲ್ಲಾ ರೋಗಿಗಳಿಗೆ ನಿಮ್ಮಜೊತೆ ನಾನಿದ್ದೇನೆ ಎಂದು ತಿಳಿಸಿದ್ದೇನೆ. ನನ್ನ ಕ್ಷೇತ್ರದ ಜನರ ಆರೋಗ್ಯ ಕಾಪಡುವುದು ನನ್ನ ಜವಬ್ದಾರಿಯಾಗಿದೆ. ಆರೋಗ್ಯ ಇಲಾಖೆಯಿಂದ ಪ್ರಕರಣ ಪ್ರತಿಯೊಂದು ಮಾಹಿತಿ ನನಗೆ ನೀಡಲು ತಿಳಿಸಿದ್ದು ಹೆಚ್ಚುವರಿ ಏನಾದರೂ ಸೌಲಭ್ಯ ಅಗತ್ಯ ಇದ್ದರೆ ತಿಳಿಸಿ ಎಂದಿದ್ದೇನೆ. ಒಟ್ಟಿನಲ್ಲಿ ಜನರ ಆರೋಗ್ಯ ನನಗೆ ಮುಖ್ಯವಾಗಿದೆ ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ಉಪವಿಭಾಗಾಧಿಕಾರಿ ಕಾರ್ತಿಕ್, ತಹಶೀಲ್ದಾರ್ ನಾಗವೇಣಿ, ಜಿಲ್ಲಾ ಆರೋಗ್ಯ ಅಧಿಕಾರಿ ಡಾ. ರಂಗನಾಥ, ಜಿಲ್ಲಾ ಆಸ್ಪತ್ರೆ ಡಿಎಸ್. ದೇವರಾಜ, ಗ್ರಾಮ ಪಂಚಾಯಿತಿ ಅಧ್ಯಕ್ಷೆ ಮಂಗಳಾ ಸಿದ್ದೇಶ್, ಉಪಾಧ್ಯಕ್ಷರಾದ ಶ್ರೀಮತಿ ಸುಧಾರಾಣಿ ನಾಗರಾಜ, ಟಿಹೆಚ್‌ಓ ಗಿರೀಶ್, ಗ್ರಾಮ ಪಂಚಾಯತಿ ಸದಸ್ಯರು ಮತ್ತು ಮುಖಂಡರು ಇದ್ದರು.

# ಭೀಕರ ರಸ್ತೆ ಅಪಘಾತ ಒಂದೇ ಕುಟುಂಬದ ನಾಲ್ವರ ಸಾವು

**ಚಿತ್ರದುರ್ಗ** : ಭೀಕರ ರಸ್ತೆ ಅಪಘಾತದಲ್ಲಿ ಒಂದೇ ಕುಟುಂಬದ ನಾಲ್ಕು ಮಂದಿ ಸೇರಿ ಐದು ಜನರು ದುರ್ಮರಣ ಹೊಂದಿರುವ ಘಟನೆ ಭಾನುವಾರ ಮುಂಜಾನೆ ಚಿತ್ರದುರ್ಗ ಸಮೀಪದ ಮಲ್ಲಾಪುರ ಸೇತುವೆಯ ಕೆಳಭಾಗದಲ್ಲಿ ಸಂಭವಿಸಿದೆ.



ಬಿಜಾಪುರ ಮೂಲದ ಸಂಗನ ಬಸಪ್ಪ(36), ಪತ್ನಿ ರೇಖಾ ಸಂಗನ ಬಸಪ್ಪ(29), ಪುತ್ರ ಅಗಸ್ತ್ಯ ಸಂಗನ ಬಸಪ್ಪ(8), ರೇಖಾ ಅವರ ಸಹೋದರ ಭೀಮಾಶಂಕರ(26) ಹಾಗೂ ಭೀಮಾಶಂಕರ್ ಸ್ನೇಹಿತ ಕೆಜಿಎಫ್ ಮೂಲದ ಮಧುಸೂದನ್(24) ಮೃತಪಟ್ಟ ದುರ್ಧೈವಿಗಳು.

ಬಿಜಾಪುರದ ಖಾಸಗಿ ಬ್ಯಾಂಕಿನಲ್ಲಿ ಕೆಲಸ ಮಾಡುತ್ತಿದ್ದ ಸಂಗನ ಬಸಪ್ಪ ತನ್ನ ಕುಟುಂಬ ಹಾಗೂ ಸಂಬಂಧಿ ಈರಣ್ಣ ಅವರ ಕುಟುಂಬದ ಜೊತೆ ಚಿಕ್ಕಮಗಳೂರು ಕಡೆಗೆ ಪ್ರವಾಸಕ್ಕಾಗಿ ತೆರಳಲು ತೀರ್ಮಾನಿಸಿ ಕಳೆದ ರಾತ್ರಿ 9 ಗಂಟೆ ಸುಮಾರಿನಲ್ಲಿ ಈರಣ್ಣ ಅವರು ಒಂದು ಕಾರಿನಲ್ಲಿ ಮತ್ತು ಸಂಗನ ಬಸಪ್ಪ ಅವರು ಮತ್ತೊಂದು ಕಾರಿನಲ್ಲಿ ಹೊರಟಿದ್ದಾರೆ.

ಕೆ.ಎ.–28, ಝಡ್–8572 ಟಾಟಾ ಕಾರನ್ನು ಸಂಗನ ಬಸಪ್ಪ ಅವರೆ ಚಾಲನೆ ಮಾಡಿಕೊಂಡು ಬರುತ್ತಿದ್ದು, ಕಾರು ಚಿತ್ರದುರ್ಗದ ಮಲ್ಲಾಪುರ ಸಮೀಪ ಬರುತ್ತಿರುವಾಗ ಸೇತುವೆ ಕೆಳಭಾಗದಲ್ಲಿ ಹೊಸಪೇಟೆಯಿಂದ ಬೆಂಗಳೂರು ಕಡೆಗೆ ತೆರಳುತ್ತಿದ್ದ ಲಾರಿಗೆ ಕಾರು ಚಾಲಕನ ನಿಯಂತ್ರಣ ತಪ್ಪಿ ಹಿಂಬದಿಯಿಂದ ರಬಸವಾಗಿ ಡಿಕ್ಕಿಹೊಡೆದಿದೆ. ಪರಿಣಾಮ ಸಂಗನ ಬಸಪ್ಪ, ಪತ್ನಿ ರೇಖಾ, ಪುತ್ರ ಅಗಸ್ತ್ಯ, ರೇಖಾ ಅವರ ಸಹೋದರ ಭೀಮಾಶಂಕರ



ಸ್ಥಳದಲ್ಲೇ ಸಾವನ್ನಪ್ಪಿದ್ದಾರೆ. ಘಟನೆಯಲ್ಲಿ ತೀವ್ರವಾಗಿ ಗಾಯಗೊಂಡಿದ್ದ ಭೀಮಾಶಂಕರ್ ಸ್ನೇಹಿತ ಮಧುಸೂದನ್ ಅವರನ್ನು ಜಿಲ್ಲಾ ಆಸ್ಪತ್ರೆಗೆ ಚಿಕಿತ್ಸೆಗಾಗಿ ದಾಖಲಿಸಲಾಗಿತ್ತು. ಆದರೆ ಚಿಕಿತ್ಸೆ ಫಲಕಾರಿಯಾಗದೆ ಮೃತಪಟ್ಟಿದ್ದಾರೆ. ಉಳಿದಂತೆ ಸಂಗನ ಬಸಪ್ಪ ಮತ್ತು ರೇಖಾ ಅವರ ಮಕ್ಕಳಾದ ಅನ್ವಿತಾ ಸಂಗನ ಬಸಪ್ಪ(6), ಆದರ್ಶ ಸಂಗನ ಬಸಪ್ಪ(4) ಇವರುಗಳು ಗಾಯಗೊಂಡಿದ್ದು ಜಿಲ್ಲಾ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿದ್ದಾರೆ.

ಸಂಗನ ಬಸಪ್ಪ ಅವರ ಕಾರು ಅಪಘಾತ ಆಗುತ್ತಿಂದ್ದತೇಯೆ ಇನ್ನೊಂದು ಕಾರಿನಲ್ಲಿದ್ದ ಈರಣ್ಣ ಅವರ ಕುಟುಂಬ ತಕ್ಷಣ ನೆರವಿಗೆ ಬಂದು ಗಾಯಗೊಂಡವರನ್ನು ಆಸ್ಪತ್ರೆಗೆ ದಾಖಲಿಸಿದ್ದಾರೆ.

ಅಪಘಾತ ಸ್ಥಳಕ್ಕೆ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಕೆ.ಪರಶುರಾಮ್ ಭೇಟಿ ನೀಡಿ ಪರಿಶೀಲನೆ ನಡೆಸಿದ್ದಾರೆ. ಈ ಬಗ್ಗೆ ಚಿತ್ರದುರ್ಗ ಗ್ರಾಮಾಂತರ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.




**ಇಂದಿನ ಚಿನ್ನ ಮತ್ತು ಬೆಳ್ಳಿ ದರಗಳು : 91.6 Kdm- 5540/gm | 85 kdam - 5140/gm | ಬೆಳ್ಳಿ : 67000 / ಕೆಜಿ**

# ಕಾರ್ಮಿಕರ ಹಿತಕಾಯಲು ಸದಾ ಸಿದ್ದ : ಟಿ ರಘುಮೂರ್ತಿ




ಚಳ್ಳಕೆರೆ ನಗರದ ಎಪಿಎಂಸಿ ಮಾರುಕಟ್ಟೆ ಸಭಾಂಗಣದಲ್ಲಿ ಹಮಾಲಿ ಕಾರ್ಮಿಕ ಒಕ್ಕೂಟ ಸಹಯೋಗದಲ್ಲಿ ಹಮ್ಮಿಕೊಂಡಿದ್ದ ಶಾಸಕ ಅಭಿನಂದನಾ ಕಾರ್ಯಕ್ರಮವನ್ನು ಶಾಸಕ ಟಿ.ರಘೂಮೂರ್ತಿ ಉದ್ಘಾಟಿಸಿದರು.

**ಚಳ್ಳಕೆರೆ :** ಚಳ್ಳಕೆರೆ ವಿಧಾನಸಭಾ ಕ್ಷೇತ್ರದಲ್ಲಿ ಹಮಾಲರೂ ಸೇರಿದಂತೆ ಎಲ್ಲಾ ವರ್ಗದ ಜನರ ಹಿತಕ್ಕಾಗಿ ನಿರಂತರ ಶ್ರಮಿಸುತ್ತಿರುವ ಕ್ಷೇತ್ರದ ಶಾಸಕ ಟಿ.ರಘುಮೂರ್ತಿ ಹ್ಯಾಟ್ರಿಕ್ ವಿಜಯ ಸಾಧಿಸುವ ಮೂಲಕ ಮತ್ತೊಮ್ಮೆ ಜನಸೇವೆಗೆ ಮುಂದಾಗಿದ್ದಾರೆ. ವಿಶೇಷವಾಗಿ ಕಾರ್ಮಿಕ ವರ್ಗಕ್ಕೆ ಶಕ್ತಿ ತುಂಬುವ ಕೆಲಸ ಮಾಡಿದ್ದಾರೆಂದು ಸಿಐಟಿಯು ಕಾರ್ಮಿಕ ಸಂಘಟನೆಯ ತಾಲ್ಲೂಕು ಟಿ.ನಿಂಗಣ್ಣ ತಿಳಿಸಿದರು.

ಅವರು, ಭಾನುವಾರ ಎಪಿಎಂಸಿ ಮಾರುಕಟ್ಟೆ ಸಭಾಂಗಣದಲ್ಲಿ ಹಮಾಲಿ ಕಾರ್ಮಿಕ ಒಕ್ಕೂಟ ಸಹಯೋಗದಲ್ಲಿ ಹಮ್ಮಿಕೊಂಡಿದ್ದ ಶಾಸಕ ಅಭಿನಂದನಾ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡಿದರು. ಕಳೆದ ಹಲವಾರು ವರ್ಷಗಳಿಂದ ಕಾರ್ಮಿಕರ ಮೂಲಭೂತ ಸಮಸ್ಯೆ ನಿವಾರಣೆ, ಬೇಡಿಕೆ ಹಾಗೂ ನಿವೇಶನ ನೀಡುವ ಕುರಿತು ಈಗಾಗಲೇ ಶಾಸಕರಿಗೆ ಮನವರಿಕೆ ಮಾಡಿಕೊಡಲಾಗಿದೆ. ಈ ಭಾರಿಯಾದರೂ ಶಾಸಕರು ಇಲ್ಲಿನ ಕಾರ್ಮಿಕರಿಗೆ ನಿವೇಶನ ಸೇರಿದಂತೆ ಎಲ್ಲಾ ಭೇಡಿಕೆಗಳನ್ನು ಈಡೇರಿಸುವತ್ತ ಹೆಚ್ಚು ಗಮನರಿಸಬೇಕೆಂದು ಕಾರ್ಮಿಕರ ಪರವಾಗಿ ಮನವಿ ಮಾಡಿದರು.

ಕಾರ್ಯಕ್ರಮ ಉದ್ಘಾಟಿಸಿ, ಸನ್ಮಾನವನ್ನು ಸ್ವೀಕರಿಸಿ ಮಾತನಾಡಿದ ಶಾಸಕ ಟಿ.ರಘುಮೂರ್ತಿ, ಪ್ರಸ್ತುತ ಅವಧಿಯೂ ಸೇರಿದಂತೆ ಒಟ್ಟು ಮೂರು ಬಾರಿ ಈ ಕ್ಷೇತ್ರದ ಶಾಸಕನಾಗಿ ನನ್ನನ್ನು ಕ್ಷೇತ್ರದ ಮತದಾರರು ಆಯ್ಕೆ ಮಾಡಲು ಇಲ್ಲಿನ ಕಾರ್ಮಿಕ ಸಂಘಟನೆಯ ಸಹಕಾರ ಪ್ರಧಾನವಾಗಿದೆ. ಯಾವುದೇ ಸಮಸ್ಯೆ, ಬೇಡಿಕೆ ಇದ್ದರೂ ಸಹ ನೀವೆಲ್ಲರೂ ಚುನಾವಣೆ ಸಂದರ್ಭದಲ್ಲಿ ನನಗೆ ಹೆಚ್ಚು ಮತ ನೀಡಿ ಜಯಸಾಧಿಸುವಂತೆ ಮಾಡಿದ್ದೀರಿ. ಕಾರ್ಮಿಕರಿಗೆ ಸರ್ಕಾರದಿಂದ ಬರುವ ಸೌಲಭ್ಯಗಳ ಬಗ್ಗೆ ಗಮನಹರಿಸಲಾಗುವುದು. ಇತ್ತೀಚೆಗೆ ಕಾರ್ಮಿಕ ಇಲಾಖೆಗೆ ನಿರ್ದೇಶನ ನೀಡಿ ಸಾವಿರಾರು ಕಾರ್ಮಿಕರಿಗೆ ಕಾರ್ಡ್‌ಗಳನ್ನು ವಿತರಿಸುವ ಕಾರ್ಯ ಮಾಡಿದ್ದೇನೆ. ಸದಾಕಾಲ ನಿಮ್ಮ ಹಿತವನ್ನು ರಕ್ಷಿಸಲು ನಾನು ಬದ್ದನಾಗಿದ್ದೇನೆಂದರು.

ಕೆಪಿಸಿಸಿ ಕರಕುಶಲ ವಿಭಾಗದ ರಾಜ್ಯಾಧ್ಯಕ್ಷ ಆರ್.ಪ್ರಸನ್ನಕುಮಾರ್, ಕಾಂಗ್ರೆಸ್ ಮುಖಂಡರಾದ ಸಿ.ಟಿ.ಶ್ರೀನಿವಾಸ್, ಕೋದಂಡರಾಮ, ವಂದನಾರಾಜು, ಚನ್ನಕೇಶವ, ಜಯರಾಂ, ಪ್ರಧಾನ ಕಾರ್ಯದರ್ಶಿ ಟಿ.ತಿಪ್ಪೇಸ್ವಾಮಿ, ಸಹ ಸಂಚಾಲಕ ಡಿ.ಎಂ.ಮಲಿಯಪ್ಪ, ದುಗ್ಗಾವರ ಬೋರಯ್ಯ, ನಾಗರಾಜ, ಎಸ್.ರಾಜಣ್ಣ, ತಿಪ್ಪೇಸ್ವಾಮಿ, ಶಿವಣ್ಣ, ಓಬಯ್ಯ, ವೆಂಕಟೇಶ್ ಮುಂತಾದವರು ಉಪಸ್ಥಿತರಿದ್ದರು.

# ಹೊಸಹಟ್ಟಿಯಲ್ಲಿ ಜನರು ಕುಡಿಯುವ ನೀರಿನಿಂದ ಅಸ್ವಸ್ಥಗೊಂಡ ಶಂಕೆ

**ಚಿತ್ರದುರ್ಗ :** ತಾಲ್ಲೂಕಿನ ಹೊಸಹಟ್ಟಿ ಗ್ರಾಮದಲ್ಲಿ ಕುಡಿಯುವ ನೀರಿನಿಂದ ಸಾರ್ವಜನಿಕ ಅಸ್ವಸ್ಥರಾಗಿದ್ದಾರೆ ಎನ್ನಲಾದ ಪ್ರಕರಣಕ್ಕೆ ಸಂಬಂಧಿಸಿದಂತೆ ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಸೋಮಶೇಖರ್ ಅವರು ಶನಿವಾರದಂದು ಗ್ರಾಮಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿದ್ದಾರೆ, ಅಲ್ಲದೆ ಅಗತ್ಯ ಮುಂಜಾಗ್ರತಾ ಕ್ರಮಗಳನ್ನು ಸಮರೋಪಾದಿಯಲ್ಲಿ ಕೈಗೊಂಡಿದ್ದು, ಇಲ್ಲಿನ ಗ್ರಾಮಸ್ಥರು ಆತಂಕಪಡುವ ಅಗತ್ಯವಿಲ್ಲ ಎಂದಿದ್ದಾರೆ.

ಹೊಸಹಟ್ಟಿ ಗ್ರಾಮದಲ್ಲಿ ಕಳೆದ ಆಗಸ್ಟ್ 05 ರಿಂದಲೂ ಕೆಲವರು ಅಸ್ವಸ್ಥರಾಗಿ ಆಸ್ಪತ್ರೆಗೆ ದಾಖಲಾಗಿ, ಚಿಕಿತ್ಸೆ ಪಡೆದಿದ್ದು, ಪೈಪ್‌ಲೈನ್ ಸೋರಿಕೆಯಿಂದಾಗಿ ಈ ರೀತಿಯಾಗಿದೆ ಎಂಬ ಸಂಶಯ ಬಂದ ಹಿನ್ನೆಲೆಯಲ್ಲಿ ಈಗಾಗಲೆ ಗ್ರಾಮಕ್ಕೆ ಕುಡಿಯುವ ನೀರು ಸರಬರಾಜು ಮಾಡಲಾಗುತ್ತಿದ್ದ ನೀರಿನ ಮೂಲವನ್ನು ಕಡಿತಗೊಳಿಸಿ, ಟ್ಯಾಂಕರ್ ಮೂಲಕ ಸಾರ್ವಜನಿಕರಿಗೆ ಸಮರ್ಪಕವಾಗಿ ನೀರು ಪೂರೈಕೆ ಮಾಡಲಾಗುತ್ತಿದೆ. ಈ ಕುರಿತು ಜಿಲ್ಲಾ ಪಂಚಾಯತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಸೋಮಶೇಖರ್ ಅವರು ಶನಿವಾರ ಗ್ರಾಮಕ್ಕೆ ಖುದ್ದು ಭೇಟಿ ನೀಡಿ, ಅಲ್ಲಿನ ಸ್ಥಿತಿಗತಿಗಳ ಪರಿಶೀಲನೆ ನಡೆಸಿದರು. ಗ್ರಾಮದ ವಿವಿಧೆಡೆ ತೆರಳಿ ಮಾಹಿತಿ ಪಡೆದುಕೊಂಡ ಅವರು, ಯಾರೂ ಕೂಡ ಆತಂಕ್ಕೆ ಒಳಗಾಗದಂತೆ ಧೈರ್ಯ ತುಂಬಿದರು. ಮುಂಜಾಗ್ರತಾ ಕ್ರಮವಾಗಿ ಈಗಾಗಲೆ ಗ್ರಾಮದ ಶಾಲೆಯಲ್ಲಿ ತಾತ್ಕಾಲಿಕ ಚಿಕಿತ್ಸಾ ಕೇಂದ್ರವನ್ನು ತೆರೆಯಲಾಗಿದ್ದು, ಜನರ ಆರೋಗ್ಯ ತಪಾಸಣೆ, ಚಿಕಿತ್ಸೆಗಾಗಿ ಶುಶ್ರೂಷಕರು, ವೈದ್ಯರನ್ನು ನಿಯೋಜಿಸಲಾಗಿದೆ, ಅಲ್ಲದೆ ಆ?ಯಂಬುಲೆನ್ಸ್ ಕೂಡ ವ್ಯವಸ್ಥೆಗೊಳಿಸಲಾಗಿದೆ. ಗ್ರಾಮದಲ್ಲಿ ಜನರಿಗೆ ಸ್ವಚ್ಛತೆ, ನೈರ್ಮಲ್ಯ ಹಾಗೂ ವೈಯಕ್ತಿಕ ಸ್ವಚ್ಛತೆ ಬಗ್ಗೆ ಆರೋಗ್ಯ ಶಿಕ್ಷಣ ನೀಡಲಾಗುತ್ತಿದ್ದು, ಜನರಲ್ಲಿ ಜಾಗೃತಿ ಮೂಡಿಸಲು ಕರಪತ್ರವನ್ನು ಕೂಡ ಹಂಚಲಾಗುತ್ತಿದೆ.



ಸಾರ್ವಜನಿಕರು ಕಾಯಿಸಿ ಆರಿಸಿದ ನೀರನ್ನು ಕುಡಿಯಲು ಉಪಯೋಗಿಸಬೇಕು, ಹಾಗೂ ಆಹಾರ ಸೇವನೆಗೂ ಮುನ್ನ ಸಾಬೂನಿನಿಂದ ಸ್ವಚ್ಛವಾಗಿ ಕೈ-ಕಾಲು ತೊಳೆದುಕೊಂಡು ವೈಯಕ್ತಿಕ ಸ್ವಚ್ಛತೆ ಕಾಪಾಡಿಕೊಳ್ಳಬೇಕು ಎಂದು ಜಿಪಂ. ಸಿಇಒ ಸೋಮಶೇಖರ್ ಅವರು ಮನವಿ ಮಾಡಿದ್ದಾರೆ.

ಗ್ರಾಮಕ್ಕೆ ಶನಿವಾರ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ. ರಂಗನಾಥ್, ತಾಲ್ಲೂಕು ವೈದ್ಯಾಧಿಕಾರಿ ಡಾ. ಗಿರೀಶ್ ಅವರು ಭೇಟಿ ನೀಡಿ, ಸಾರ್ವಜನಿಕರ ಆರೋಗ್ಯ, ಹಾಗೂ ಪರಿಸ್ಥಿತಿಯ ಕುರಿತು ನಿಗಾ ವಹಿಸಲು ಕ್ರಮ ಕೈಗೊಂಡಿದ್ದಾರೆ. ಡಿಹೆಚ್‌ಒ ಡಾ. ರಂಗನಾಥ್ ಅವರು ಈ ಕುರಿತು ಮಾಹಿತಿ ನೀಡಿದ್ದು, ಗ್ರಾಮದಲ್ಲಿ 08 ಕಡೆಗಳಲ್ಲಿನ ನೀರಿನ ಮಾದರಿಯನ್ನು ಸಂಗ್ರಹಿಸಿ ಪರೀಕ್ಷೆಗೆ ಒಳಪಡಿಸಲಾಗಿದ್ದು, ಈ ಪೈಕಿ 07 ಮಾದರಿಗಳು ಕುಡಿಯಲು ಯೋಗ್ಯವಾಗಿದೆ ಎಂದು ಹಾಗೂ ಒಂದು ಮಾತ್ರ ಯೋಗ್ಯವಿಲ್ಲ ಎಂಬುದಾಗಿ ವರದಿ ಬಂದಿದೆ. ಆದಾಗ್ಯೂ ಗ್ರಾಮಕ್ಕೆ ಪೂರೈಸಲಾಗುತ್ತಿದ್ದ ನೀರಿನ ಮೂಲವನ್ನು ಕಡಿತಗೊಳಿಸಿ, ಟ್ಯಾಂಕರ್ ಮೂಲಕವೇ ನೀರು ಪೂರೈಸಲಾಗುತ್ತಿದೆ. ಅಸ್ವಸ್ಥರಾಗಿ ಆಸ್ಪತ್ರೆಗೆ ದಾಖಲಾಗಿ ಚಿಕಿತ್ಸೆ ಪಡೆಯುತ್ತಿದ್ದ ಎಲ್ಲರೂ ಚೇತರಿಸಿಕೊಳ್ಳುತ್ತಿದ್ದು, ಗುಣಮುಖರಾಗುತ್ತಿದ್ದಾರೆ. ಯಾರೂ ಕೂಡ ಆತಂಕಪಡುವ ಅಗತ್ಯವಿಲ್ಲ ಎಂದಿದ್ದಾರೆ.

ಗ್ರಾಮದಲ್ಲಿ ಸ್ವಚ್ಛತೆಗೆ ವಿಶೇಷ ಕ್ರಮಗಳನ್ನು ಕೈಗೊಳ್ಳಲಾಗಿದ್ದು, ಡೆಲ್ಟಾ ಮೈತ್ರಿನ್ ಸಿಂಪಡಣೆ ಕೂಡ ಮಾಡಲಾಗುತ್ತಿದೆ. ಗ್ರಾಮದ ಮನೆ ಮನೆಯ ಸರ್ವೆ ಮಾಡಲಾಗುತ್ತಿದ್ದು, ಆಶಾ ಕಾರ್ಯಕರ್ತೆಯರು ಪ್ರತಿಯೊಂದು ಮನೆ ಮನೆಗಳಲ್ಲಿ ಜನರ ಆರೋಗ್ಯ ವಿಚಾರಣೆ ಕೈಗೊಳ್ಳುತ್ತಿದ್ದಾರೆ. ಗ್ರಾಮದ ಚರಂಡಿಗಳ ಸ್ವಚ್ಛತಾ ಕಾರ್ಯ ಕೂಡ ನಡೆಸಲಾಗುತ್ತಿದೆ.

ಉಪವಿಭಾಗಾಧಿಕಾರಿ ಕಾರ್ತಿಕ್, ತಹಸಿಲ್ದಾರ್ ನಾಗವೇಣಿ, ತಾ.ಪಂ. ಕಾರ್ಯನಿರ್ವಾಹಕ ಅಧಿಕಾರಿ ಹನುಮಂತಪ್ಪ, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ ಸಹಾಯಕ ಇಂಜಿನಿಯರ್ ಗಳು ಕೂಡ ಗ್ರಾಮಕ್ಕೆ ತೆರಳಿ ಮುಂಜಾಗ್ರತಾ ಕ್ರಮಗಳ ಬಗ್ಗೆ ನಿಗಾ ವಹಿಸಿದ್ದಾರೆ. ಇಲ್ಲಿನ ಗ್ರಾಮ ಪಂಚಾಯತ್ ಪಿಡಿಒ, ಗ್ರಾಮಲೆಕ್ಕಾಧಿಕಾರಿಗಳು, ಗ್ರಾಮ ಸಹಾಯಕರು ಕೂಡ ಯಾವುದೇ ಅಹಿತಕರ ಘಟನೆಗಳು ನಡೆಯದಂತೆ ಅಗತ್ಯ ಮುಂಜಾಗ್ರತಾ ಕ್ರಮಗಳನ್ನು ಸಮರೋಪಾದಿಯಲ್ಲಿ ಕೈಗೊಳ್ಳುವಲ್ಲಿ ನಿರತರಾಗಿದ್ದಾರೆ.

# ನನ್ನಿವಾಳ ಗ್ರಾ.ಪಂ. ಅಧ್ಯಕ್ಷ, ಉಪಾಧ್ಯಕ್ಷರ ಆಯ್ಕೆ



**ಚಳ್ಳಕೆರೆ :** ತಾಲ್ಲೂಕಿನ ನನ್ನಿವಾಳ ಗ್ರಾಮ ಪಂಚಾಯಿತಿ ಎರಡನೇ ಅವಧಿಯ ನೂತನ ಅಧ್ಯಕ್ಷರು, ಉಪಾಧ್ಯಕ್ಷರ ಆಯ್ಕೆ ಪ್ರಕ್ರಿಯೆ ಚುನಾವಣಾಧಿಕಾರಿಗಳಾ ತಹಶೀಲ್ದಾರ್ ರೇಹಾನ್ ಪಾಷ ನೇತೃತ್ವದಲ್ಲಿ ನಡೆಯಿತು.

ಗ್ರಾಮ ಪಂಚಾಯಿತಿಯ ಸದಸ್ಯರು ಚುನಾವಣಾ ಪ್ರಕ್ರಿಯೆಲ್ಲಿ ಪಾಲ್ಗೊಂಡು ಅಧ್ಯಕ್ಷರಾಗಿ ನನ್ನಿವಾಳದ ಶಿವಮ್ಮ ರಾಜಣ್ಣ, ಉಪಾಧ್ಯಕ್ಷರಾಗಿ ಬೀಬಿಜಾನ್ ದಾದಾಪೀರ್‌ರವರನ್ನು ಆಯ್ಕೆ ಮಾಡಲಾಯಿತು. ಸದಸ್ಯರಾದ ಬಸವರಾಜು, ದೊರೆ ಅಪ್ಪಣ್ಣ, ರವಿಕುಮಾರ್, ನಾಗರಾಜು, ಸಮೀವುಲ್ಲಾ, ಪಾರಿಜಾತ, ಪಿಡಿಒ ಪಾಲಯ್ಯ ಉಪಸ್ಥಿತರಿದ್ದರು.

ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಕೆ.ವೀರಭದ್ರಪ್ಪ, ಶಶಿಧರ, ರಾಮಣ್ಣ, ತಿಮ್ಮರಾಯಪ್ಪ, ಉಮೇಶ್, ಗಂಗಾಧರಪ್ಪ, ಭೀಮಚಂದ್ರ, ಗುರುಮೂರ್ತಿ ಮುಂತಾದವರು ಅಭಿನಂದಿಸಿದರು.

# ದೇವರ ಎತ್ತುಗಳಿಗೆ ಕೊರತೆಯಾಗದಂತೆ ನೋಡಿಕೊಳ್ಳಿ : ಶಾಸಕ ಟಿ.ರಘುಮೂರ್ತಿ



**ಚಳ್ಳಕೆರೆ :** ತಾಲ್ಲೂಕಿನ ವಿವಿಧ ಭಾಗಗಳಲ್ಲಿರುವ ದೇವರ ಎತ್ತುಗಳಿಗೆ ಮೇವು, ನೀರಿನ ಕೊರತೆಯಾಗದಂತೆ ಎಚ್ಚರಿಕೆ ವಹಿಸಿ ಎಂದು ಪಶು ಇಲಾಖೆ ಅಧಿಕಾರಿಗಳಿಗೆ ಶಾಸಕ ಟಿ.ರಘುಮೂರ್ತಿ ಸೂಚನೆ ನೀಡಿದರು.

ಅವರು, ನಗರದ ಹೊರವಲಯದಲ್ಲಿರುವ ಅಜ್ಜಯ್ಯನಗುಡಿ ಬಳಿ ಇರುವ ದೇವರ ಎತ್ತುಗಳ ಸ್ಥಳಕ್ಕೆ ಭೇಟಿ ನೀಡಿ ಅವುಗಳ ಆರೋಗ್ಯ ವಿಚಾರಿಸಿ ಮಾತನಾಡಿದರು. ಸರ್ಕಾರ ಈಗಾಗಲೇ ದೇವರ ಎತ್ತುಗಳ ರಕ್ಷಣೆಗಾಗಿ ಮೇವು ಖರೀದಿಸಲು 80 ಸಾವಿರ ಹಣವನ್ನು ಬಿಡುಗಡೆಗೊಳಿಸಿದೆ, ಇದು ಸಾಕಾಗುವುದಿಲ್ಲ, ಮತ್ತಷ್ಟು ಹಣ ಬಿಡುಗಡೆ ಮಾಡಬೇಕೆಂದು ಸದನದಲ್ಲಿ ಪಶು ಸಂಗೋಪನ ಸಚಿವ ಕೆ.ವೆಂಕಟೇಶ್‌ರವರಲ್ಲಿ ಮನವಿ ಮಾಡಲಾಗಿದೆ.

ಪಶು ಇಲಾಖೆಯ ಸಹಾಯಕ ನಿರ್ದೇಶಕ ರೇವಣ್ಣ ಮಾತನಾಡಿ, ಈ ಬಾರಿ ಮಳೆಯ ಕೊರತೆಯಿಂದ ಮೇವಿನ ಕೊರತೆ ಉಂಟಾಗುವ ಮೊದಲೇ ಇಲಾಖೆ ಎಚ್ಚೆತ್ತುಕೊಂಡು ಮೇವು, ನೀರು ಒದಗಿಸುವ ಕೆಲಸ ಮಾಡುತ್ತಿದೆ. ಸರ್ಕಾರದ ಜೊತೆಯಲ್ಲಿ ಸಂಘ ಸಂಸ್ಥೆಯವರೂ ಸಹ ಮೇವು ನೀಡುತ್ತಿದ್ದು ಯಾವುದೇ ಕೊರತೆ ಉಂಟಾಗಿಲ್ಲ. ನಮ್ಮ ವ್ಯಾಪ್ತಿಯಲ್ಲಿ ಸುಮಾರು 1500 ಸಾವಿರ ದೇವರ ರಾಸುಗಳಿದ್ದು ಅವುಗಳ ಮೇವಿ ಒದಗಿಸಲು 80 ಸಾವಿರ ಹಣ ಬಿಡುಗಡೆ ಮಾಡಲಾಗಿದೆ. ಅದರಂತೆ ಕ್ಷೇತ್ರದ ಕಡುಬನಕಟ್ಟೆಯ ಚೌಡೇಶ್ವರಿ, ನನ್ನಿವಾಳ ಮುತ್ತಿಗಾರಹಳ್ಳಿ, ಕುರುಡಿಹಳ್ಳಿಯ ನಂದನ ಗೋಶಾಲೆಗಳಿಗೆ ಮೇವು ಒದಗಿಸುವ ಕಾರ್ಯ ನಡೆಯುತ್ತಿದೆ. ತಾಲ್ಲೂಕಿನ ನೆಲಗೇತನಹಟ್ಟಿ, ವರವು, ನನ್ನಿವಾಳ, ಬೊರದೇವರಹಟ್ಟಿಯೂ ಸೇರಿದಂತೆ ಹಲವಾರು ಕಡೆಗಳಲ್ಲಿ ದೇವರ ಎತ್ತುಗಳಿದ್ದು ಅವುಗಳ ಆರೋಗ್ಯ ತಪಾಸಣೆ, ಮೇವಿನ ಕೊರತೆಯಾಗದಂತೆ ಎಚ್ಚರಿಕೆ, ಲಾಲನೆ, ಪಾಲನೆ ಮಾಡಲಾಗುತ್ತಿದೆ ಎಂದರು.

ಪಶು ವೈದ್ಯಾಧಿಕಾರಿ ಡಾ.ಶ್ರೀನಿವಾಸ್‌ಬಾಬು, ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಕೆ.ವೀರಭದ್ರಪ್ಪ, ಶಶಿಧರ, ನಗರಸಭಾ ಸದಸ್ಯರಾದ ಬಿ.ಟಿ.ರಮೇಶ್‌ಗೌಡ, ಎಂ.ಜೆ.ರಾಘವೇಂದ್ರ, ಮುಖಂಡರಾದ ಸಿ.ಟಿ.ಶ್ರೀನಿವಾಸ್, ಕೃಷ್ಣಮೂರ್ತಿ, ಚೇತನ್‌ಕುಮಾರ್, ರುದ್ರಮುನಿ, ಕಿಲಾರಿಗಳಾದ ಸಿದ್ದೇಶ್, ಪಾಲಯ್ಯ, ಗಾದ್ರಿಪಾಲಯ್ಯ, ಜೋಗಯ್ಯ ಮುಂತಾದವರು ಉಪಸ್ಥಿತರಿದ್ದರು.

## ಫಾಸ್ಟ್ ನ್ಯೂಸ್

### ಹರ್ ಘರ್ ತಿರಂಗಾ ಅಭಿಯಾನ



ಹರ್ ಘರ್ ತಿರಂಗಾ ಅಭಿಯಾನದ ಅಂಗವಾಗಿ ಅಪರ ಜಿಲ್ಲಾಧಿಕಾರಿ ಬಿ.ಟಿ.ಕುಮಾರಸ್ವಾಮಿ ಅವರು ತಮ್ಮ ನಿವಾಸದಲ್ಲಿ ಧ್ವಜಾರೋಹಣ ನೆರವೇರಿಸಿ, ಗೌರವ ಸಲ್ಲಿಸಿದರು.

**ಚಿತ್ರದುರ್ಗ :** ಭಾರತ ಸ್ವಾತಂತ್ರ್ಯದ ಅಮೃತ ಮಹೋತ್ಸವದ ಅಂಗವಾಗಿ ಹರ್ ಘರ್ ತಿರಂಗಾ ಅಭಿಯಾನ ಹಮ್ಮಿಕೊಳ್ಳಲಾಗಿದ್ದು, ಇದರ ಅಂಗವಾಗಿ ಐತಿಹಾಸಿಕ ಕಲ್ಲಿನಕೋಟೆ ಸೇರಿದಂತೆ ಜಿಲ್ಲೆಯಾದ್ಯಂತ ನಗರ, ಪಟ್ಟಣ, ಹಳ್ಳಿ, ಶಾಲಾ-ಕಾಲೇಜು, ಸರ್ಕಾರಿ ಕಚೇರಿ, ಮನೆ, ಅಂಗಡಿ ಮಳಿಗೆಗಳ ಮೇಲೆ ಸಾರ್ವಜನಿಕರು ಭಾನುವಾರ ಧ್ವಜಾರೋಹಣ ಮಾಡಿ ಸಂಭ್ರಮಿಸಿದರು.

ಸ್ವಾತಂತ್ರ್ಯದ ಅಮೃತ ಮಹೋತ್ಸವದ ಅಂಗವಾಗಿ ಆಗಸ್ಟ್ 13 ರಿಂದ ಆಗಸ್ಟ್ 15 ರವರೆಗೆ ಮೂರು ದಿನಗಳ ಕಾಲ ಹರ್ ತಿರಂಗಾ ಅಭಿಯಾನ ಆಯೋಜಿಸಲಾಗಿದ್ದು, ಜಿಲ್ಲೆಯ ಎಲ್ಲರೂ ತಮ್ಮ ಮನೆಗಳ ಮೇಲೆ ಧ್ವಜಾರೋಹಣ ಮಾಡಿ ದೇಶಭಕ್ತಿ ಮೆರೆದರು.

ಹರ್ ಘರ್ ತಿರಂಗಾ ಅಭಿಯಾನದಡಿಯಲ್ಲಿ ಜಿಲ್ಲೆಗೆ 25 ಸಾವಿರ ರಾಷ್ಟ್ರಧ್ವಜ ಹಂಚಿಕೆ ಮಾಡಲಾಗಿದೆ. ಚಿತ್ರದುರ್ಗ ನಗರದ ತರಾಸು ರಂಗಮಂದಿರ ಆವರಣದಲ್ಲಿರುವ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಕಚೇರಿಯಲ್ಲಿ ವಿತರಿಸಲಾಗುತ್ತಿದ್ದು, ಎಲ್ಲ ಸ್ಥಳೀಯ ಸಂಸ್ಥೆಗಳು, ಗ್ರಾಮ ಪಂಚಾಯತಿಗಳ ಮೂಲಕವೂ ಸಾರ್ವಜನಿಕರಿಗೆ ರಾಷ್ಟ್ರಧ್ವಜ ಲಭ್ಯವಾಗುವಂತೆ ಮಾಡಲಾಗಿದೆ. ಶಾಲಾ ಕಾಲೇಜುಗಳಿಗೂ ಹಂಚಿಕೆ ಮಾಡಲಾಗಿದೆ. ಪ್ರತಿ ರಾಷ್ಟ್ರಧ್ವಜಕ್ಕೆ ರೂ. 25. 50 ದರ ನಿಗದಿಪಡಿಸಲಾಗಿದೆ.

ಸರ್ಕಾರದ ನಿರ್ದೇಶನದಂತೆ ಹರ್ ಘರ್ ತಿರಂಗಾ ಕಾರ್ಯಕ್ರಮದಲ್ಲಿ ಆಗಸ್ಟ್ 13 ರಿಂದ 15 ರವರೆಗೆ ಸೆಲ್ಫೀ ಅಪ್‌ಲೋಡ್ ಮಾಡುವುದು. ಸೆಲ್ಫೀಗಳನ್ನು ಹ್ಯಾಶ್ಟ್ಯಾಗ್‌ಗಳ ಜೊತೆ ಪೋಸ್ಟ್ ಮಾಡುವುದು. ಆಗಸ್ಟ್ 13ರಂದು ಸೆಲ್ಫೀ ವಿತ್ ತಿರಂಗಾ, 14ರಂದು ಹರ್ ದಿಲ್ ತಿರಂಗಾ, 15ರಂದು ಹರ್ ಘರ್ ತಿರಂಗಾ ಛಾಯಾಚಿತ್ರವನ್ನು ಹರ್ ಘರ್ ತಿರಂಗಾ ವೆಬ್‌ಸೈಟ್ ಘಿಚಿಡಿಘಿಚಿಡಿಣಡಿಚಿಟಿರಿಚಿ.ಛಿಠಿಟ ನಲ್ಲಿ ಅಪ್‌ಲೋಡ್ ಮಾಡಬೇಕು. ಅಪ್‌ಲೋಡ್ ಮಾಡಿದ ತಕ್ಷಣ ಆನ್‌ಲೈನ್‌ನಲ್ಲಿ ಪ್ರಮಾಣ ಲಭ್ಯವಾಗಲಿದೆ ಎಂದು ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕ ಎಸ್. ಕೆ.ಮಲ್ಲಿಕಾರ್ಜುನ್ ತಿಳಿಸಿದ್ದಾರೆ.

### ಬೆಂಕಿ ಅವಘಡ : ಗಾಯಾಳುಗಳ ಸ್ಥಿತಿ

**ಬೆಂಗಳೂರು :** ಬಿಬಿಎಂಪಿ ಆವರಣದ ಗುಣನಿಯಂತ್ರಣ ಲ್ಯಾಬ್‌ನಲ್ಲಿ ಸಂಭವಿಸಿದ ಬೆಂಕಿ ಅವಘಡದಲ್ಲಿ ಗಾಯಾಗೊಂಡವರಿಗೆ ವಿಕ್ಟೋರಿಯಾ ಆಸ್ಪತ್ರೆಯ ಟ್ರಾಮಾ ಸೆಂಟರ್ ಚಿಕಿತ್ಸೆ ಮುಂದುವರೆದಿದೆ. ಒಂಬತ್ತರಲ್ಲಿ ಜನರಲ್ಲಿ ಮೂವರು ಗಾಯಾಳುಗಳ ಸ್ಥಿತಿ ಗಂಭೀರವಾಗಿದೆ.

### ಅಭ್ಯರ್ಥಿಗಳಿಂದ ಸರ್ಕಾರಕ್ಕೆ ಪತ್ರ

**ಬೆಂಗಳೂರು :** ಪಿಎಸ್‌ಐ ನೇಮಕಾತಿ ಪರೀಕ್ಷೆಯಲ್ಲಿ ಪ್ರಾಮಾಣಿಕವಾಗಿ ಆಯ್ಕೆಯಾಗಿದ್ದ ಅಭ್ಯರ್ಥಿಗಳನ್ನು ನ್ಯಾಯಾಂಗ ತನಿಖೆಗೆ ಒಳಪಡಿಸುವಂತೆ ರಾಜ್ಯ ಸರ್ಕಾರಕ್ಕೆ ಪತ್ರ ಬರೆಯಾಲಾಗಿದೆ. ಈ ಪ್ರಕರಣದ ಬಗ್ಗೆ ನ್ಯಾಯಾಂಗ ತನಿಖೆಗೆ ರಾಜ್ಯ ಸರ್ಕಾರ ಆದೇಶಿಸಿತ್ತು. ಹೀಗಾಗಿ 545 ನೇಮಕಾತಿಯಲ್ಲಿ ಆಯ್ಕೆಯಾದ 490 ಅಭ್ಯರ್ಥಿಗಳನ್ನು ನ್ಯಾಯಾಂಗ ತನಿಖಾ ವ್ಯಾಪ್ತಿಗೆ ತರಲು ಮನವಿ ಮಾಡಿ ಸರ್ಕಾರಕ್ಕೆ ಪತ್ರ ಬರೆದಿದ್ದಾರೆ.

### ಎನ್‌ಐಎ ಅಧಿಕಾರಿಗಳು ದಾಳಿ

**ಬೆಂಗಳೂರು :** ಕರ್ನಾಟಕ ಸೇರಿದಂತೆ ಇತರೆ 5 ರಾಜ್ಯಗಳ 14 ಸ್ಥಳಗಳಲ್ಲಿ ಏಕಕಾಲಕ್ಕೆ ಎನ್‌ಐಎ ಅಧಿಕಾರಿಗಳು ದಾಳಿ ನಡೆಸಿದ್ದಾರೆ. ಪಿಎಫ್‌ಐ ಹಾಗೂ ಇತರೆ ಸಂಘಟನೆಗಳು ಉಗ್ರ ಚಟುವಟಿಕೆ ಹಾಗೂ ಇನ್ನಿತರ ಅಕ್ರಮ ಚಟುವಟಿಕೆ ಭಾಗಿಯಾಗಿರುವ ಶಂಕೆಯಲ್ಲಿ ಎನ್?ಐಎ ದಾಳಿ ಮಾಡಿದೆ ಎಂದು ತಿಳಿದುಬಂದಿದೆ. ಭಾರತದಲ್ಲಿ 2047ರೊಳಗೆ ಪಿಎಫ್ ಐ ಆರ್ಮಿ ಸ್ಥಾಪಿಸಲು ಮುಂದಾಗಿರುವ ಮಾಹಿತಿ ಸಿಕ್ಕಿರುವ ಹಿನ್ನೆಲೆಯಲ್ಲಿ ಕರ್ನಾಟಕದ ದಕ್ಷಿಣ ಕನ್ನಡ , ಮಹಾರಾಷ್ಟ್ರ, ಕೇರಳ, ಪಶ್ಚಿಮ ಬಂಗಾಳ ಹಾಗೂ ಇತರ ರಾಜ್ಯಗಳಲ್ಲಿ ಎನ್‌ಐಎ ಏಕಕಾಲದಲ್ಲಿ ದಾಳಿ ಮಾಡಿದೆ.

## ಫಾಸ್ಟ್ ನ್ಯೂಸ್

### ಗೂಡಂಗಡಿಗಳ ತೆರವು ಕಾರ್ಯ : ಸಂಚಾರಕ್ಕೆ ಅನುವು

**ಚಳ್ಳಕೆರೆ :** ತಾಲ್ಲೂಕಿನ ದೊಡ್ಡ ಹೋಬಳಿ ಕೇಂದ್ರವಾದ ಪರಶುರಾಮಪುರದಲ್ಲಿ ಪ್ರತಿನಿತ್ಯವೂ ಜನರ, ವಾಹನಗಳ ಸಂಖ್ಯೆಯೂ ಏರುತ್ತಿದೆ. ವಾಹನಗಳ ಸುಗಮ ಸಂಚಾರಕ್ಕೆ ಅನುವು ಮಾಡಿಕೊಡುವ ನಿಟ್ಟಿನಲ್ಲಿ ಬೀದಿಬದಿ ವ್ಯಾಪಾರಿಗಳು ಸಹಕರಿಸಬೇಕು ಎಂದು ಪಿಎಸ್ಐ ಎಂ.ಕೆ.ಬಸವರಾಜ ಸೂಚಿಸಿದರು.

ಅದನ್ನು ತಪ್ಪಿಸುವ ದೃಷ್ಟಿಯಿಂದ ವ್ಯಾಪಾರಿಗಳು ರಸ್ತೆಯಿಂದ ಸುಮಾರು ದೂರದಲ್ಲಿ ತಮ್ಮ ಅಂಗಡಿಗಳನ್ನು ಇಟ್ಟುಕೊಂಡು ವ್ಯಾಪಾರ ಮಾಡಿಕೊಳ್ಳಬೇಕು.

ಪರಶುರಾಮಪುರ ಹೋಬಳಿ ಕೇಂದ್ರದಿಂದ ಪಾವಗಡ, ಆಂಧ್ರ ಪ್ರದೇಶಕ್ಕೆ ಸಂಪರ್ಕಿಸುವ ನೂರಾರು ವಾಹನಗಳು ಓಡಾಟ ನಡೆಸುತ್ತದೆ. ವ್ಯಾಪಾರಿಗಳು ವೃತ್ತದ ಸುತ್ತಮುತ್ತಲ ರಸ್ತೆಯ ಮೇಲೆಯೇ ತಮ್ಮ ಅಂಗಡಿಗಳನ್ನು ಇಟ್ಟುಕೊಂಡು ವಾಹನ ಸಂಚಾರಕ್ಕೆ ತೊಂದರೆಯಾಗುತ್ತಿದ್ದ ಅಂಗಡಿಗಳನ್ನು ತೆರವು ಮಾಡಿಸಿದರು.

### ನಾಗರಹೊಳೆ ಆನೆ ಮೃತ

**ಮೈಸೂರು :** ನಾಗರಹೊಳೆ ಅರಣ್ಯ ಪ್ರದೇಶದ ಆನೆಚೌಕೂರಿನ ಮತ್ತಿಗೋಡು ಸಾಕಾನೆ ಶಿಬಿರದಲ್ಲಿ ಪಳಗಿಸಲಾಗುತ್ತಿದ್ದ ಆನೆ ಮೃತಪಟ್ಟಿದೆ ಶಿಬಿರದ ಹೊರಗಡೆ ಪಳಗಿಸುವ ವೇಳೆ 50 ವರ್ಷದ ಸುಬ್ರಹ್ಮಣ್ಯ ಎಂಬ ಆನೆ ನಿತ್ರಾಣವಾಗಿ ಬಿದ್ದಿದೆ. ಈ ವೇಳೆ ತಕ್ಷಣ ಪಶು ವೈದ್ಯಾಧಿಕಾರಿಗಳು ಅಗತ್ಯ ಚಿಕಿತ್ಸೆ ನೀಡಿದರೂ ಚಿಕಿತ್ಸೆಗೆ ಸ್ಪಂದಿಸದೆ ಸಾವನ್ನಪ್ಪಿದೆ. ಆರ್ಥರಿಟೀಸ್ ನಿಂದ ಬಳಲುತ್ತಿದ್ದ ಸುಬ್ರಹ್ಮಣ್ಯ ಸೋಂಕಿನಿಂದ ಮೃತಪಟ್ಟಿದೆ ಎಂದು ಮರಣೋತ್ತರ ಪರೀಕ್ಷೆ ವೇಳೆ ಮಾಹಿತಿ ಸಿಕ್ಕಿದೆ.

### ದೇವರ ಎತ್ತುಗಳಿಗೆ ಮೇವು ವಿತರಣೆ



**ಚಿತ್ರದುರ್ಗ :** ತಾಲೂಕಿನ ತುರುವನೂರು ಹೋಬಳಿಯ ಬೆಳಘಟ್ಟ ಗ್ರಾಮದಲ್ಲಿ ದೇವರ ಎತ್ತುಗಳಿಗೆ ರಘುಮೂರ್ತಿ ಅವರು ದೇವರ ಎತ್ತುಗಳಿಗೆ ಮೇವು ವಿತರಣೆ ಮಾಡಿದರು.

ಈ ಸಂದರ್ಭದಲ್ಲಿ ಪಶುವೈದ್ಯಾಧಿಕಾರಿ ಡಾ. ಇಂದ್ರಬಾಯಿ, ತಹಶೀಲ್ದಾರ್ ನಾಗವೇಣಿ , ಗ್ರಾಮ ಪಂಚಾಯಿತಿ ಅಧ್ಯಕ್ಷೆ ಮಂಜುಶ್ರೀ, ಉಪಾಧ್ಯಕ್ಷ ರಾಮಚಂದ್ರರೆಡ್ಡಿ, ಮುಖಂಡರಾದ ಬಾಬುರೆಡ್ಡಿ, ಶುಭಾಷ್ ರೆಡ್ಡಿ ಮತ್ತು ಸಾರ್ವಜನಿಕರು ಮತ್ತು ಮುಖಂಡರು ಇದ್ದರು.

### ಸಾಮುದ್ರ ಗ್ರಾ.ಪಂ. ಅಧ್ಯಕ್ಷ, ಉಪಾಧ್ಯಕ್ಷರ ಆಯ್ಕೆ

ಚಿತ್ರದುರ್ಗ : ಭರಮಸಾಗರ ಹೋಬಳಿ ಇಸಾಮುದ್ರ ಗ್ರಾಮ ಪಂಚಾಯಿತಿ ಅಧ್ಯಕ್ಷರಾಗಿ ಸವಿತಾ ರೇವಣಸಿದ್ದಪ್ಪ, ಉಪಾಧ್ಯಕ್ಷರಾಗಿ ಶಿವಮ್ಮ ರಾಮಚಂದ್ರನಾಯ್ಕ ಇವರುಗಳು ಶನಿವಾರ ನೆಡದ ಚುನಾವಣೆಯಲ್ಲಿ ಅವಿರೋಧವಾಗಿ ಆಯ್ಕೆಯಾಗಿದ್ದಾರೆ.

ನೂತನವಾಗಿ ಆಯ್ಕೆಯಾದ ಅಧ್ಯಕ್ಷ-ಉಪಾಧ್ಯಕ್ಷರುಗಳಿಗೆ ಸದಸ್ಯರುಗಳು ಶುಭ ಹಾರೈಸಿದರು.

### ಸಿದ್ದಾಪುರ ಗ್ರಾ.ಪಂ. ಅಧ್ಯಕ್ಷ, ಉಪಾಧ್ಯಕ್ಷರ ಆಯ್ಕೆ

**ಚಿತ್ರದುರ್ಗ :** ತಾಲ್ಲೂಕಿನ ಸಿದ್ದಾಪುರ ಗ್ರಾಮ ಪಂಚಾಯಿತಿ ಅಧ್ಯಕ್ಷೆಯಾಗಿ ಶ್ರೀಮತಿ ತಮ್‌ಕಿನ್ ಭಾನು, ಉಪಾಧ್ಯಕ್ಷೆಯಾಗಿ ಶ್ರೀಮತಿ ಶಿಲ್ಪ ಹೆಚ್. ಇವರುಗಳು ಅವಿರೋಧವಾಗಿ ಆಯ್ಕೆಯಾಗಿದ್ದಾರೆ.

ತೋಟಗಾರಿಕೆ ಇಲಾಖೆಯ ಟಿ.ಆರ್.ಯಶವಂತಕುಮಾರ್ ಚುನಾವಣಾಧಿಕಾರಿಯಾಗಿ ಕರ್ತವ್ಯ ನಿರ್ವಹಿಸಿದರು.

### ಮುಂದಿನ ಚುನಾವಣೆಯಲ್ಲಿ ಬಿಜೆಪಿ ಅಡ್ರೆಸ್ ಇರಲ್ಲ

ಮಾತೆತ್ತಿದ್ರೆ ಮೋದಿ ಮೋದಿ ಅಂತೇಳಿ ಪ್ರಚಾರ ಮಾಡುತ್ತಿದ್ದರು. ಕರ್ನಾಟಕ ಜನರು ಬುದ್ಧಿವಂತರು, ಅದೆಲ್ಲಾ ವರ್ಕೌಟ್ ಆಗಿಲ್ಲ. ಮುಂದಿನ ಚುನಾವಣೆಯಲ್ಲಿ ಬಿಜೆಪಿ ಅಡ್ರೆಸ್ ಇರಲ್ಲ. ಗ್ಯಾರಂಟಿ ಜಾರಿ ಮಾಡದಿದ್ರೆ ಹೋರಾಟ ಮಾಡುವುದಾಗಿ ಹೇಳಿದ್ದರು. ಈಗ ಮಾತಾಡಲು ಏನೂ ಇಲ್ಲ, ಸುಮ್ಮನೆ ಆರೋಪ ಮಾಡ್ತಿದ್ದಾರೆ ಎಂದು ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಚಿವ ಶಿವರಾಜ್ ತಂಗಡಗಿ ಹೇಳಿದರು.

# ಬುದ್ಧನ ಚಿಂತನೆಗಳು ಜೀವನಕ್ಕೆ ಅತ್ಯವಶ್ಯಕ:ಹೆಚ್.ಆಂಜನೇಯ




**ನವಯಾನ ಬುದ್ಧ ಸಂಘದಿಂದ ಏರ್ಪಡಿಸಲಾಗಿದ್ದ ಧಮ್ಮ ಸಾಹಿತ್ಯ ಸಮ್ಮೇಳನ ಉದ್ಘಾಟಿಸಿ ಮಾಜಿ ಸಚಿವ ಹೆಚ್. ಆಂಜನೇಯ ಮಾತನಾಡಿದರು.**

**ಚಿತ್ರದುರ್ಗ :** ಬುದ್ಧನ ಚಿಂತನೆಯಿಂದ ಜಾತಿ ಮತ್ತು ಭ್ರಷ್ಟಾಚಾರ ಮುಕ್ತ ಸಮಾಜ ನಿರ್ಮಾಣ ಮಾಡಲು ಸಾಧ್ಯ ಎಂದು ಮಾಜಿ ಸಚಿವ ಹೆಚ್.ಆಂಜನೇಯ ಹೇಳಿದರು.

ನವಯಾನ ಬುದ್ಧ ಸಂಘದಿಂದ ಕ್ರೀಡಾ ಭವನದಲ್ಲಿ ಭಾನುವಾರ ಹಮ್ಮಿಕೊಳ್ಳಲಾಗಿದ್ದ ಧಮ್ಮ ಸಾಹಿತ್ಯ ಸಮ್ಮೇಳನ ಉದ್ಘಾಟಿಸಿ ಮಾತನಾಡಿದರು.

ಕರ್ನಾಟಕ ದಲಿತ ಸಂಘರ್ಷ ಸಮಿತಿ ಸಂಸ್ಥಾಪಕ ಪ್ರೊ.ಬಿ.ಕೃಷ್ಣಪ್ಪನವರ ಆಶಯದಂತೆ ಧ್ವನಿ ಇಲ್ಲದವರ, ಶೋಷಿತರ ಪರವಾಗಿ ನಿಲ್ಲಿ. ನಾನು ಸಮಾಜ ಕಲ್ಯಾಣ ಸಚಿವನಾಗಿದ್ದಾಗ ಜಿಲ್ಲೆಯಲ್ಲಿ 250 300 ವಸತಿ ಶಾಲೆಗಳನ್ನು ಆರಂಭಿಸಿದ್ದೇನೆ. ಡಾ.ಬಿ.ಆರ್.ಅಂಬೇಡ್ಕರ್, ಡಾ.ಬಾಬು ಜಗಜೀವನರಾಂ ಇವರುಗಳು ನಮ್ಮ ನಾಯಕರು. ಇಂದಿರಾಗಾಂಧಿ ದೇಶದ ಪ್ರಧಾನಿಯಾಗಿದ್ದಾಗ ಬ್ಯಾಂಕ್‌ಗಳನ್ನು ರಾಷ್ಟ್ರೀಕರಣಗೊಳಿಸಿದರು. ಶಿಕ್ಷಣ ಪಡೆದು ದಲಿತರು ತಮ್ಮ ಹಕ್ಕುಗಳಿಗಾಗಿ ಸಂಘಟಿತರಾಗಿ ಎಂದು ಹೆಚ್.ಆಂಜನೇಯ ಕರೆ ನೀಡಿದರು.

ಪೌರ ನೌಕರರ ಸಂಘದ ರಾಜ್ಯಾಧ್ಯಕ್ಷ ಜಿ.ಎಸ್. ಮಂಜುನಾಥ್ ಮಾತನಾಡಿ ರಾಜಕೀಯದಿಂದ ಹೊರಗೆ ಬಂದು ನಿಂತು ನೋಡಿದಾಗ ದಲಿತರು ಎಲ್ಲವನ್ನು ಕಳೆದುಕೊಂಡಿದ್ದೇವೇನೋ ಎನ್ನುವಂತೆ ಭಾಸವಾಗುತ್ತದೆ. ಅನಾದಿ ಕಾಲದಿಂದಲೂ ತುಳಿತಕ್ಕೊಳಗಾಗಿ ನೋವು ಅನುಭವಿಸಿಕೊಂಡು ಬರುತ್ತಿದ್ದಾರೆ. ಸತ್ಯ, ಸಂವಿಧಾನ ಎಲ್ಲವೂ ಗೊತ್ತಿದ್ದರೂ ಬೌದ್ಧ ಧರ್ಮಕ್ಕೆ ಹೋಗಲು ಏಕೆ ಆಗುತ್ತಿಲ್ಲ ಎನ್ನುವುದೇ ನೋವಿನ ಸಂಗತಿ ಎಂದು ವಿಷಾಧಿಸಿದರು.

ಚುನಾವಣೆಯಲ್ಲಿ ಸ್ಪರ್ಧಿಸಿದಾಗ ನಾನು ಮತ ಕೇಳಲು ಹೋದಂತ ಸಂದರ್ಭದಲ್ಲಿ ಮನೆ, ಹಟ್ಟಿ, ದೇವಸ್ಥಾನಗಳಿಂದ ಹೊರ ನಿಂತಿದ್ದುಂಟು. ಆಗ ಮನಸ್ಸಿಗೆ ತುಂಬಾ ನೋವಾಗುತ್ತದೆ. ಕವಾಡಿಗರಹಟ್ಟಿಯಲ್ಲಿ ಕಲುಷಿತ ನೀರು ಸೇವಿಸಿ ಐವರು ಮೃತಪಟ್ಟಿದ್ದು, ಇನ್ನೂರಕ್ಕೂ ಹೆಚ್ಚು ಮಂದಿ ಅಸ್ವಸ್ಥರಾಗಿದ್ದರು ಅಲ್ಲಿನ ದಲಿತರು ನಿಜ ಸ್ಥಿತಿಯನ್ನು ಯಾರ ಮುಂದೆಯೂ ಹೇಳಿಕೊಳ್ಳದಂತ ಅಸಹಾಯಕ ಸ್ಥಿತಿಯಲ್ಲಿರುವುದು ನಿಜಕ್ಕೂ ಶೋಚನೀಯ. ಹೋರಾಟದಲ್ಲಿ ಮುಂಚೂಣಿಯಲ್ಲಿರುವ ಚಿತ್ರದುರ್ಗ ಜಿಲ್ಲೆಯಲ್ಲಿ ದಲಿತರ ಸ್ಥಿತಿ ಚಿಂತಾಜನಕವಾಗಿದೆ. ಪದವೀಧರ ಕ್ಷೇತ್ರ, ಶಿಕ್ಷಕರ ಕ್ಷೇತ್ರದ ಚುನಾವಣೆಯಲ್ಲಿಯೂ ಮತದಾರರು ಹಣ ಪಡೆದು ಮತ ನೀಡುತ್ತಾರೆನ್ನುವುದರಲ್ಲಿ ಸಂಶಯವಿಲ್ಲ. ಚುನಾವಣೆಯಲ್ಲಿ ಟಿಕೆಟ್ ಕೊಡುವುದು ದುಡ್ಡಿದ್ದವರಿಗೆ, ಗೆಲ್ಲುವುದು ಹಣವಂತರೆ. ಬೌದ್ಧ ಧರ್ಮ ಪ್ರಪಂಚಾದ್ಯಂತ ಪಾಲನೆಯಲ್ಲಿದೆ. ನೂರಾರು ದಲಿತ ಸಂಘರ್ಷ ಸಮಿತಿಗಳು ಹುಟ್ಟಿಕೊಂಡಿವೆ. ರಾಜ್ಯಾಧ್ಯಕ್ಷನಾಗುವುದು ಚಿತ್ರದುರ್ಗದಿಂದಲೆ ಎನ್ನುವ ಪ್ರತೀತಿಗೆ ಬೇರೆಯವರು ಗೇಲಿ ಮಾಡುವಂತಾಗಿದೆ. ರಾಜಕೀಯ ವ್ಯಕ್ತಿಗಳಿಂದ ಆಗದ ಕೆಲಸ ಸಂಘಟನೆಯಿಂದ ಆಗುತ್ತದೆ. ಅದಕ್ಕಾಗಿ ಸಂಘಟನೆ ಬೇಕು ಎಂದು ಹೇಳಿದರು.

ಎಂ.ಮಲ್ಲಿಕಾರ್ಜುನ್ ಹಿರೇಹಳ್ಳಿ ಅಧ್ಯಕ್ಷತೆ ವಹಿಸಿ ಮಾತನಾಡುತ್ತ ಬುದ್ಧನ ದಾರಿ ಒಂದೆ ಮಾರ್ಗ. ಆನೆ ನಡೆದಿದ್ದೆ ದಾರಿ ಎಂಬಂತೆ. ಆಸೆಯೇ ದುಃಖಕ್ಕೆ ಮೂಲ ಎನ್ನುವುದು ಬುದ್ಧನ ಪರಿಕಲ್ಪನೆ. ವೈರುದ್ಯವಿಲ್ಲದ ಬುದ್ಧ ಧರ್ಮವನ್ನು ಎಲ್ಲರೂ ಪಾಲಿಸಿದರೆ ಅಸಮಾನತೆ ಎನ್ನುವುದೇ ಇರುವುದಿಲ್ಲ ಎಂದರು.

ನವಯಾನ ಉಪಾಸಕರುಗಳಾದ ದುರುಗೇಶ್, ಚಿಕ್ಕಣ್ಣ, ನೀಲಕಂಠಪ್ಪ, ಸಂಸ್ಕೃತಿ ಚಿಂತಕ ಹರ್ಷಕುಮಾರ್ ಕುಗ್ವೆ ವೇದಿಕೆಯಲ್ಲಿದ್ದರು.

ನವಯಾನ ಬುದ್ಧ ಸಂಘದ ಉಪಾಸಕರುಗಳಾದ ಪ್ರೊ.ಸಿ.ಕೆ.ಮಹೇಶ್, ಎ.ರಾಮು ಗೋಸಾಯಿ, ಕೆ.ಕುಮಾರ್, ಟಿ.ರಾಮು, ಹೆಚ್.ಆನಂದ್‌ಕುಮಾರ್ ಇನ್ನು ಅನೇಕರು ಧಮ್ಮ ಸಾಹಿತ್ಯ ಸಮ್ಮೇಳನದಲ್ಲಿ ಭಾಗವಹಿಸಿದ್ದರು.

ಬುದ್ಧನ ರಾಜಕೀಯ ತತ್ವಜ್ಞಾನ, ಬುದ್ಧ ಪ್ರಣೀತ ಆರ್ಥಿಕ ಚಿಂತನೆ, ಬೌದ್ಧ ಧಮ್ಮದ ಸಾಮಾಜಿಕ ಆಶಯ, ಬುದ್ಧ ಮತ್ತು ಆತನ ಧಮ್ಮದ ತಾತ್ವಿಕ ನೆಲೆ ಎನ್ನುವ ನಾಲ್ಕು ವಿಚಾರಗಳ ಕುರಿತು ಗೋಷ್ಠಿಗಳು ನಡೆಯಿತು.

## ಅಶೋಕ ಸಿದ್ದಾಪುರ ಗ್ರಾ.ಪಂ. ಅಧ್ಯಕ್ಷ, ಉಪಾಧ್ಯಕ್ಷರ ಆಯ್ಕೆ



**ಮೊಳಕಾಲ್ಮುರು :** ಮೊಳಕಾಲ್ಮುರುತಾಲೂಕಿನ ಅಶೋಕ ಸಿದ್ದಾಪುರ ಗ್ರಾಮ ಪಂಚಾಯತಿ ಎರಡನೇ ಅವಧಿಗೆ ಶುಕ್ರವಾರ ನಡೆದ ಅಧ್ಯಕ್ಷ ಉಪಾಧ್ಯಕ್ಷ ಚುನಾವಣೆಯಲ್ಲಿ ಅಧ್ಯಕ್ಷರಾಗಿ ಎಚ್ ಸಣ್ಣ ಗಂಗಣ್ಣ ಉಪಾಧ್ಯಕ್ಷರಾಗಿ ರುದ್ರಮ್ಮ ಆಯ್ಕೆಯಾಗಿರುವುದಾಗಿ ಚುನಾವಣಾಧಿಕಾರಿ ಪ್ರಕಟಿಸಿದರು

23 ಸದಸ್ಯರ ಬಲವುಳ್ಳ ಗ್ರಾಮ ಪಂಚಾಯಿತಿಯಲ್ಲಿ ಅಧ್ಯಕ್ಷ ಸ್ಥಾನವು ಎಸ್ ಟಿ ,ಉಪಾಧ್ಯಕ್ಷ ಸ್ಥಾನವು ಎಸ್ ಟಿ .. ಮಹಿಳೆಗೆ ಮೀಸಲಾಗಿದ್ದು . ಅಧ್ಯಕ್ಷ ಸ್ಥಾನಕ್ಕೆ ಎಚ್ ಸಣ್ಣ ಗಂಗಣ್ಣ, ಮತ್ತು ಎಂ ತಿಪ್ಪೇಸ್ವಾಮಿ ನಾಮಪತ್ರ ಸಲ್ಲಿಸಿದ್ದು.. ಸಣ್ಣ ಗಂಗಣ್ಣ 15 ಮತಪಡೆದರೆ ಎಂ ತಿಪ್ಪೇಸ್ವಾಮಿಗೆ 7 ಮತ ಪಡೆದಿರುವುದರು , ಒಂದು ಮತ ತಿರಸ್ಕೃತ ಗೊಂಡ ಕಾರಣ ಅಧ್ಯಕ್ಷರಾಗಿ ಎಚ್ ಸಣ್ಣ ಗಂಗಣ್ಣ ರವರನ್ನು ಅಧ್ಯಕ್ಷರನ್ನಾಗಿ ಚುನಾವಣಾಧಿಕಾರಿ ಘೋಷಿಸಿದರು

ಉಪಾಧ್ಯಕ್ಷ ಸ್ಥಾನಕ್ಕೆ ರುದ್ರಮ್ಮ ಮಾತ್ರ ನಾಮಪತ್ರ ಸಲ್ಲಿಸಿದ್ದ ಕಾರಣ ಇವರನ್ನು ಅವಿರೋಧವಾಗಿ ಆಯ್ಕೆ ಮಾಡಲಾಗಿದೆ ಎಂದು ಚುನಾವಣಾಧಿಕಾರಿ ಪ್ರಕಟಿಸಿದರು

ಚುನಾವಣಾಧಿಕಾರಿಯಾಗಿ ಸಿಡಿಪಿಓ ನವೀನ್ ಕುಮಾರ್ ಉಪತಹಸಿಲ್ದಾರ್ ಮಹಾಂತೇಶ್ ಚುನಾವಣಾ ಕರ್ತವ್ಯ ನಿರ್ವಹಿಸಿದರು

ಸಂದರ್ಭದಲ್ಲಿ ಪಿಡಿಓ ಮಾರಣ್ಣ ಸದಸ್ಯರಾದ ಎಸ್. ನಿರ್ಮಲ ಗಂಗಾಧರ ,ಡಿಎಚ್. ಗಂಗಾಧರ ಜಿ ಗೌರಿಶಂಕರ್ ,ಎಂ ತಿಮ್ಮಕ್ಕ , ಪಿ ಪದ್ಮಾವತಿ ,ಪರಮೇಶಪ್ಪ ,ಓಲಯ್ಯ, ಗಂಗರತ್ನ, ಮಾರಕ, ಎಚ್‌ಎನ್.ಅಂಪಮ್ಮ, ಬಿ ಮಹಾಂತೇಶ್,ಹಾಗೂ ಗ್ರಾಮ ಪಂಚಾಯಿತಿ ಸಿಬ್ಬಂದಿ ಮತ್ತು ಪೊಲೀಸ್ ಸಿಬ್ಬಂದಿ ಉಪಸ್ಥಿತರಿದ್ದರು.

## ಬಿ.ಜಿ.ಕೆರೆ ಗ್ರಾ.ಪಂ. ಅಧ್ಯಕ್ಷ, ಉಪಾಧ್ಯಕ್ಷರ ಆಯ್ಕೆ

**ಮೊಳಕಾಲ್ಮುರು :** ಮೊಳಕಾಲ್ಮುರು ತಾಲೂಕಿನಲ್ಲಿ ಅತಿ ಹೆಚ್ಚು ಜಿದ್ದಾಜಿದ್ದಿ ಕಣವಾದ ಬಿಜಿಕೆರೆ ಗ್ರಾಮ ಪಂಚಾಯತಿ ಎರಡನೇ ಅವಧಿಗೆ ಶುಕ್ರವಾರ ನಡೆದ ಅಧ್ಯಕ್ಷ ಉಪಾಧ್ಯಕ್ಷರ ಚುನಾವಣೆಯಲ್ಲಿ ಅಧ್ಯಕ್ಷರಾಗಿ ಎಸ್ ಜಯಣ್ಣ ಉಪಾಧ್ಯಕ್ಷರಾಗಿ ಮಂಗಳಗೌಡ ಆಯ್ಕೆಯಾಗಿರುವುದಾಗಿ ಚುನಾವಣಾಧಿಕಾರಿ ಪ್ರಕಟಿಸಿದರು

26 ಸದಸ್ಯರ ಬಲವುಳ್ಳ ಬಿಜಿಕೆರೆ ಗ್ರಾಮ ಪಂಚಾಯಿತಿ ಅಧ್ಯಕ್ಷ ಸ್ಥಾನವು ಎಸ್ ಸಿ ,ಉಪಾಧ್ಯಕ್ಷ ಸ್ಥಾನವು ಸಾಮಾನ್ಯ ಮಹಿಳೆ ,ಸ್ಥಾನಕ್ಕೆ ಮೀಸಲಿತ್ತು. ಅಧ್ಯಕ್ಷ ಸ್ಥಾನಕ್ಕೆ ಎಸ್ ಜಯಣ್ಣ.. ಕೆ.ಟಿ ಪಾರ್ವತಮ್ಮ ನಾಮಪತ್ರ ಸಲ್ಲಿಸಿದ್ದು. ಜಯಣ್ಣ ಗೆ 14 ಮತ ಪಾರ್ವತಮ್ಮ ಗೆ 12 ಮತ ಬಿದ್ದಿದ್ದು ಅಧ್ಯಕ್ಷರಾಗಿ ಎಸ್ ಜಯಣ್ಣ ಆಯ್ಕೆಯಾಗಿರುವುದಾಗಿ ಚುನಾವಣಾಧಿಕಾರಿ ಘೋಷಿಸಿದರು

ಉಪಾಧ್ಯಕ್ಷ ಸ್ಥಾನಕ್ಕೆ ಮಂಗಳ ಗೌಡ ಹಾಗೂ ಬಿ ಜ್ಯೋತಿ ಮಧ್ಯೆ ಸ್ಪರ್ಧೆ ಏರ್ಪಟ್ಟಿತ್ತು ಅದರಲ್ಲಿ ಮಂಗಳ ಗೌಡ 15 ಮತ ಪಡೆದಿದ್ದು ಜ್ಯೋತಿ 11ಮತ ಪಡೆದಿರುವುದರಿಂದ ಮಂಗಳಗೌಡ ರವರನ್ನು ಉಪಾಧ್ಯಕ್ಷರಾಗಿ ಚುನಾವಣಾಧಿಕಾರಿ ಪ್ರಕಟಿಸಿದರು

ಚುನಾವಣಾ ಅಧಿಕಾರಿಯಾಗಿ ತಾಲೂಕು ಪಂಚಾಯಿತಿ ಪ್ರಭಾರಿ ಇ ಓ .ಗಣೇಶ್, ಸಹಾಯಕರಾಗಿ ತಾಲೂಕು ಪಂಚಾಯಿತಿ ವ್ಯವಸ್ಥಾಪಕ ನಂದೀಶ್ ,ವಿಜಯಕುಮಾರ್ ಕರ್ತವ್ಯ ನಿರ್ವಹಿಸಿದರು

ಸಂದರ್ಭದಲ್ಲಿ ಪಿಡಿಒ ಮಲ್ಲಿಕಾರ್ಜುನ್, ಕಾಂಗ್ರೆಸ್ ಯುವ ಮುಖಂಡರಾದ ಡಾ ಬಿ .ಯೋಗೇಶ್ ಬಾಬು, ಬಿಟಿ ನಾಗಭೂಷಣ್, ಡಾ. ಬಾಬುರೆಡ್ಡಿ, ಗ್ರಾಮ ಪಂಚಾಯಿತಿ ಸದಸ್ಯರಾದ ಪುಷ್ಪ ,ರೇಖಾ, ಬಸ್ಸಮ್ಮ, ಭಾಗ್ಯಮ್ಮ, ಮಹೇಶ್, ರುದ್ರಮುನಿ, ಬಸವರಾಜ್, ಜಯಮ್ಮ, ರತ್ನಮ್ಮ, ಪಾಲಮ್ಮ, ಪಾಪಣ್ಣ, ಶಿವಾರೆಡ್ಡಿ ,ಬಸಯ್ಯ ,ಅಜ್ಜಪ್ಪ, ಆನಂದ. ಹಾಗೂ ಮುಖಂಡರು ಉಪಸ್ಥಿತರಿದ್ದರು.

## ಅಲೆಮಾರಿಗಳ ಆಯೋಗ ರಚನೆಯಾಗಬೇಕೆಂದು ಸಿ.ಎಂ.ಗೆ ಒತ್ತಡ ಸಿ.ಎಸ್.ಧ್ವಾರಕನಾಥ್



**ಅಲೆಮಾರಿ ಸಮುದಾಯದ ಸಮಸ್ಯೆ ಹಾಗೂ ಸವಾಲುಗಳ ಕುರಿತು ಏರ್ಪಡಿಸಲಾಗಿದ್ದ ಸಂವಾದ ಗೋಷ್ಠಿಯಲ್ಲಿ ಸಿ.ಎಸ್.ಧ್ವಾರಕನಾಥ್‌ಗೆ ಸನ್ಮಾನ.**

**ಚಿತ್ರದುರ್ಗ :** ಟೆಂಟ್, ಗುಡಿಸಲು, ಗುಡಾರಗಳಲ್ಲಿ ವಾಸಿಸುತ್ತಿರುವ ಅಲೆಮಾರಿ ಅರೆಅಲೆಮಾರಿಗಳು ಸಮಾಜದ ಮುಖ್ಯ ವಾಹಿನಿಗೆ ಬರಬೇಕಾದರೆ ಅಲೆಮಾರಿಗಳ ಆಯೋಗ ರಚನೆಯಾಗಬೇಕೆಂದು ರಾಜ್ಯದ ಮುಖ್ಯಮಂತ್ರಿ ಸಿದ್ದರಾಮಯ್ಯನವರ ಮೇಲೆ ಒತ್ತಡ ಹಾಕಲಾಗಿದೆ ಎಂದು ಹಿಂದುಳಿದ ವರ್ಗಗಳ ಆಯೋಗದ ಮಾಜಿ ಅಧ್ಯಕ್ಷ ಸಿ.ಎಸ್.ಧ್ವಾರಕನಾಥ್ ಹೇಳಿದರು.

ಅಲೆಮಾರಿ ಮಹಾಸಭಾ, ಕರ್ನಾಟಕ ಶಾಂತಿ ಮತ್ತು ಸೌಹಾರ್ದ ವೇದಿಕೆ, ವಿಮುಕ್ತಿ ವಿದ್ಯಾಸಂಸ್ಥೆ ವತಿಯಿಂದ ಅಲೆಮಾರಿ ಸಮುದಾಯದ ಸಮಸ್ಯೆ ಮತ್ತು ಸವಾಲುಗಳ ಕುರಿತು ಭಾರತ ಸೇವಾದಳದ ಕಚೇರಿಯಲ್ಲಿ ಶನಿವಾರ ಏರ್ಪಡಿಸಲಾಗಿದ್ದ ಸಂವಾದ ಉದ್ಘಾಟಿಸಿ ಮಾತನಾಡಿದರು.

ಅಲೆಮಾರಿ, ಅರೆಅಲೆಮಾರಿ ಸಮುದಾಯ ಯಾರ ಕಣ್ಣಿಗೂ ಕಾಣುತ್ತಿಲ್ಲ. ಶೇ.8 ರಿಂದ ಹತ್ತು ಪರ್ಸೆಂಟ್‌ನಷ್ಟು ಅಲೆಮಾರಿಗಳು ಭಾರತದಲ್ಲಿದ್ದಾರೆ. ಮಹಾರಾಷ್ಟ್ರ, ಕರ್ನಾಟಕದಲ್ಲಿ ಜಾಸ್ತಿಯಿದ್ದಾರೆ. ರಾಜ್ಯದಲ್ಲಿ ಅಂದಾಜು 48 ಲಕ್ಷದಷ್ಟು ಅಲೆಮಾರಿಗಳಿದ್ದಾರೆ. ಕುಲದೀಪ್‌ಸಿಂಗ್ ಆಯೋಗದ ಪ್ರಕಾರ ಎರಡರಿಂದ ಎರಡುವರೆ ಲಕ್ಷಕ್ಕೆ ಒಬ್ಬ ಶಾಸಕ ಇರಬೇಕು. ದುರಂತವೆಂದರೆ ಒಬ್ಬ ಶಾಸಕ, ಸಚಿವ, ಎಂಎಲ್‌ಸಿ. ಕೂಡ ಇಲ್ಲ. ಇದು ಒಂದು ಕಡೆಯಿರಲಿ. ಜಿಲ್ಲಾ ಪಂಚಾಯಿತಿ, ಸದಸ್ಯ, ಮೇಯರ್‌ಗಳು ಕೂಡ ಇದುವರೆವಿಗೂ ಯಾರು ಆಗಿಲ್ಲ. ರಾಜಕೀಯ ಶಕ್ತಿ ಇಲ್ಲದ ಕಾರಣ ದೇಶಕ್ಕೆ ಸ್ವಾತಂತ್ರ್ಯ ಬಂದು ಎಪ್ಪತ್ತಾರು ವರ್ಷಗಳಾಗಿದ್ದರೂ ಇನ್ನು ಅಲೆಮಾರಿಗಳು ಟೆಂಟ್‌ಗಳು ಹೀನಾಯವಾಗಿ ವಾಸ ಮಾಡುತ್ತಿದ್ದಾರೆಂದು ವಿಷಾಧಿಸಿದರು.

ಛಲವಾದಿ ಗುರುಪೀಠದ ಬಸವನಾಗಿದೇವಸ್ವಾಮಿ ಮಾತನಾಡಿ ಡಾ.ಬಿ.ಆರ್.ಅಂಬೇಡ್ಕರ್‌ರವರು ಕೊಡುಗೆಯಾಗಿ ದೇಶಕ್ಕೆ ನೀಡಿರುವ ಸಂವಿಧಾನವನ್ನು ಪ್ರತಿಯೊಬ್ಬರು ಓದಿಕೊಂಡಾಗ ಮಾತ್ರ ತನ್ನ ಹಕ್ಕು ಏನೆಂಬುದು ಗೊತ್ತಾಗುತ್ತದೆ. ಭಾರತ 77 ನೇ ಸ್ವಾತಂತ್ರ್ಯ ದಿನ ಆಚರಿಸಿಕೊಳ್ಳುತ್ತಿರುವ ಇಂದಿನ ಪರಿಸ್ಥಿತಿಯಲ್ಲಿ ಅಲೆಮಾರಿ, ಅರೆಅಲೆಮಾರಿಗಳು ಇನ್ನು ಮೂಲಭೂತ ಸೌಲಭ್ಯ ಸಿಕ್ಕಿಲ್ಲ ಎಂದು ಹೋರಾಟ ನಡೆಸುತ್ತಿರುವುದು ನೋವಿನ ಸಂಗತಿ ಎಂದರು.

ವಿಧಾನಸಭೆಯಲ್ಲಿ ಹಿಂಭಾಗಿಲಿನಿಂದ ಓಡಾಡುವವರ ಸಂಖ್ಯೆಯೇ ಜಾಸ್ತಿಯಾಗಿದೆ. ಅದಕ್ಕಾಗಿ ಅಲೆಮಾರಿಗಳು ಸಂವಿಧಾನವನ್ನು ಓದಿಕೊಂಡಾಗ ಯಾರನ್ನು ಹೇಗೆ ಪ್ರಶ್ನಿಸಿ ಹಕ್ಕು ಪಡೆದುಕೊಳ್ಳಬೇಕು ಎನ್ನುವುದು ಗೊತ್ತಾಗುತ್ತದೆ. ಇಲ್ಲದಿದ್ದರೆ ಶೋಷಣೆಯಿಂದ ಹೊರಬರಲು ಆಗುವುದಿಲ್ಲ. ಪ್ರತಿ ಜಿಲ್ಲೆಯಲ್ಲಿಯೂ 20 ರಿಂದ 25 ಕೋಟಿ ರೂ.ಅನುದಾನ ಸರ್ಕಾರಕ್ಕೆ ವಾಪಸ್ ಹೋಗುತ್ತಿದೆ. ಶಿಕ್ಷಣ, ಸಂಘಟನೆ, ಹೋರಾಟದಿಂದ ಮಾತ್ರ ಅಂಬೇಡ್ಕರ್‌ರವರ ಸಂವಿಧಾನದ ಆಶಯ ಈಡೇರಲಿದೆ ಎಂದು ಹೇಳಿದರು.


ಬಸವ ರಮಾನಂದಸ್ವಾಮಿ ಮಾತನಾಡಿ ಸಾಮಾಜಿಕ ಮನ್ನಣೆ ಸಿಗಬೇಕಾದರೆ ಅಲೆಮಾರಿ, ಅರೆಅಲೆಮಾರಿಗಳ ಬದುಕು ಅಭಿವೃದ್ದಿಯಾಗಬೇಕು. ಅಂಬೇಡ್ಕರ್ ಹೇಳಿರುವಂತೆ ಶಿಕ್ಷಣವಂತರಾಗಬೇಕು. ಹೋರಾಟದಿಂದ ಮಾತ್ರ ಸಂವಿಧಾನಬದ್ದವಾಗಿ ಸಿಗಬೇಕಾದ ಹಕ್ಕುಗಳನ್ನು ಸರ್ಕಾರದಿಂದ ಪಡೆಯಬಹುದು. ಮಕ್ಕಳಿಗೆ ಆಸ್ತಿ ಮಾಡುವ ಬದಲು ಶಿಕ್ಷಣವಂತರನ್ನಾಗಿ ಮಾಡಿ ಆಗ ಸಮಾಜದಲ್ಲಿ ಬದಲಾವಣೆ ತರಲು ಸಾಧ್ಯ. ರಾಜ್ಯದ 31 ಜಿಲ್ಲೆಗಳಲ್ಲಿಯೂ ಅಲೆಮಾರಿ, ಅರೆಅಲೆಮಾರಿ ಜನಾಂಗದ ಮಕ್ಕಳ ಶಿಕ್ಷಣಕ್ಕೆ ಉಚಿತ ವಸತಿ ಶಾಲೆಗಳನ್ನು ತೆರೆಯಬೇಕು. ಶಿಕ್ಷಣದೊಂದಿಗೆ ಕೌಶಲ್ಯ ತರಬೇತಿಗಳನ್ನು ಪಡೆದುಕೊಂಡಾಗ ಸ್ವಾವಲಂಭಿಗಳಾಗಿ ಬದುಕು ಕಟ್ಟಿಕೊಳ್ಳಬಹುದು ಎಂದು ಅಲೆಮಾರಿ ಜನಾಂಗಕ್ಕೆ ಕರೆ ನೀಡಿದರು.

ಅಲೆಮಾರಿ ಮಹಾಸಭಾ ಅಧ್ಯಕ್ಷ ನಾಗರಾಜ್ ಕೆ.ಎಂ. ವಿಮುಕ್ತಿ ವಿದ್ಯಾಸಂಸ್ಥೆಯ ನಿರ್ದೇಶಕ ಆರ್.ವಿಶ್ವಸಾಗರ್ ಇವರುಗಳು ಮಾತನಾಡಿದರು.

ಕರ್ನಾಟಕ ಶಾಂತಿ ಮತ್ತು ಸೌಹಾರ್ದ ವೇದಿಕೆ ಅಧ್ಯಕ್ಷ ನರೇನಹಳ್ಳಿ ಅರುಣ್‌ಕುಮಾರ್, ಬಡ್ಗ ಜಂಗಮ ಸಂಘದ ಅಧ್ಯಕ್ಷ ಗುರುಮೂರ್ತಿ, ಕೊರಚ ಸಂಘದ ಜಿಲ್ಲಾಧ್ಯಕ್ಷ ವೈ.ಕುಮಾರ್, ನ್ಯಾಯವಾದಿ ಓ.ಪ್ರತಾಪ್‌ಜೋಗಿ ಇನ್ನು ಮುಂತಾದವರು ವೇದಿಕೆಯಲ್ಲಿದ್ದರು.

ಫಾಸ್ಟ್ ನ್ಯೂಸ್

# ಅಧ್ಯಕ್ಷ, ಉಪಾಧ್ಯಕ್ಷರು ಅಭಿನಂದನೆ ತಿಳಿಸಿದ ಶಾಸಕ



**ಚಳ್ಳಕೆರೆ :** ವಿಧಾನಸಭಾ ಕ್ಷೇತ್ರದ 20 ಗ್ರಾಮ ಪಂಚಾಯಿತಿಗಳಲ್ಲಿ ಎರಡನೇ ಅವಧಿಗೆ ಅಧ್ಯಕ್ಷ, ಉಪಾಧ್ಯಕ್ಷ ಆಯ್ಕೆ ಪ್ರಕ್ರಿಯೆ ನಡೆದಿದ್ದು, ಬಹುತೇಕ ಕಾಂಗ್ರೆಸ್ ಪಕ್ಷದ ಬೆಂಬಲಿತರೇ ಅಧ್ಯಕ್ಷ ಸ್ಥಾನವನ್ನು ಗಿಟ್ಟಿಸಿಕೊಳ್ಳುವಲ್ಲಿ ಯಶಸ್ವಿಯಾಗಿದ್ದಾರೆ ಎಂದು ಶಾಸಕ ಟಿ.ರಘುಮೂರ್ತಿ ಹೇಳಿದರು.

ಅವರು, ನಗರದ ಶಾಸಕ ಭವನದಲ್ಲಿ ಚನ್ನಮ್ಮನಾಗತಿಹಳ್ಳಿ, ಬೆಳಗೆರೆ, ನನ್ನಿವಾಳ, ಪಗಡಲಬಂಡೆ, ಬುಡ್ನಹಟ್ಟಿ ಮುಂತಾದ ಗ್ರಾಮ ಪಂಚಾಯಿತಿ ನೂತನ ಅಧ್ಯಕ್ಷ, ಉಪಾಧ್ಯಕ್ಷರನ್ನು ಅಭಿನಂದಿಸಿ ಮಾತನಾಡಿದರು. ಕಾಂಗ್ರೆಸ್ ಪಕ್ಷದ ಹಲವಾರು ಯೋಜನೆಗಳಿಗೆ ಜನರು ಮನ್ನಣೆ ನೀಡಿದ್ದಾರೆ. ಕಳೆದ 65 ವರ್ಷಗಳಿಂದ ಆಡಳಿತ ನಡೆಸಿಕೊಂಡ ಬಂದ ಕಾಂಗ್ರೆಸ್ ಪಕ್ಷ ಬಡ, ಮಧ್ಯಮ, ನಿರ್ಗತಿಕರ ಅಭಿವೃದ್ದಿಗೆ ಶ್ರಮಿಸಿದ ಪಕ್ಷವಾಗಿದೆ. ಕಳೆದ ಚುನಾವಣೆಯಲ್ಲಿ ನಮ್ಮ ಪಕ್ಷದ ಮೇಲೆ ವಿಶ್ವಾಸವಿಟ್ಟು ರಾಜ್ಯದ ಜನರು ಬಹುತಮದಿಂದ ಗೆಲ್ಲಿಸಿದ್ದಾರೆ. ಸರ್ಕಾರವೂ ಸಹ ಐದು ಗ್ಯಾರಂಟಿಗಳನ್ನು ಜಾರಿಗೆ ಮಾಡುವ ಮೂಲಕ ನುಡಿದಂತೆ ನಡೆಯುವ ಸರ್ಕಾರ ಎಂಬ ಹೆಗ್ಗಳಿಗೆ ಪಾತ್ರವಾಗಿದೆ.

ನಮ್ಮ ಪಕ್ಷದ ಕಾರ್ಯಕ್ರಮ, ಯೋಜನೆಗಳನ್ನು ಮೆಚ್ಚಿರುವ ಮತದಾರ ಮುಂಬರುವ ಲೋಕಸಭೆ, ಜಿಲ್ಲಾ, ತಾಲ್ಲೂಕು ಪಂಚಾಯಿತಿ ಚುನಾವಣೆಯಲ್ಲೂ ಹೆಚ್ಚು ಸ್ಥಾನಗಳನ್ನು ಗೆಲ್ಲಿಸುವ ವಿಶ್ವಾಸ ಹೆಚ್ಚಿದೆ. ಪ್ರಸ್ತುತ ಆಯ್ಕೆಗೊಂಡ ನಮ್ಮ ಪಕ್ಷದ ಅಧ್ಯಕ್ಷ, ಉಪಾಧ್ಯಕ್ಷರು ಉತ್ತಮ ಕಾರ್ಯಗಳನ್ನು ಮಾಡುವ ಮೂಲಕ ಜನರ ವಿಶ್ವಾಸ ಗಳಿಸಬೇಕು. ಸರ್ಕಾರ ಪ್ರತಿಯೊಂದು ಸೌಲಭ್ಯವನ್ನು ಜನರಿಗೆ ಪ್ರಾಮಾಣಿಕವಾಗಿ ತಲುಪಿಸಬೇಕು, ಸಿದ್ದರಾಮಯ್ಯ ನೇತೃತ್ವದಲ್ಲಿ ಬಡ ಜನರ ಕಲ್ಯಾಣಕ್ಕಾಗಿ ಐದು ಗ್ಯಾರಂಟಿಗಳನ್ನು ಜಾರಿಗೆ ತಂದಿದ್ದು ಅದನ್ನ ಜನರು ಸದುಪಯೋಗ ಪಡಿಸಿಕೊಳ್ಳುವಂತೆ ನೋಡಿಕೊಳ್ಳಬೇಕು ಎಂದು ಕಿವಿ ಮಾತು ಹೇಳಿದರು.

ನನ್ನಿವಾಳ ಪಂಚಾಯಿತಿ ಅಧ್ಯಕ್ಷೆ ಶಿವಮ್ಮ, ಉಪಾಧ್ಯಕ್ಷೆ ಬೀಬಿಜಾನ್, ನಿಜಲಿಂಗಪ್ಪ, ಮಧುಕುಮಾರ್, ಮಹಾಲಿಂಗಪ್ಪ, ನಾಗಲಿಂಗಮ್ಮ, ಪಗಡಲಬಂಡೆ ಅಧ್ಯಕ್ಷ ಡಿ.ಕೆ.ಕಲ್ಲೇಶಪ್ಪ, ಉಪಾಧ್ಯಕ್ಷೆ ತಿಪ್ಪಮ್ಮ, ಬುಡ್ನಹಟ್ಟಿ ಅಧ್ಯಕ್ಷ ಸುಮಲತಾ, ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಕೆ.ವೀರಭದ್ರಪ್ಪ, ಶಶಿಧರ, ರವಿಕುಮಾರ್, ಕುಮಾರ್‌ನಾಯಕ, ಬೋರಣ್ಣ, ಕೃಷ್ಣನಾಯ್ಕ, ಸುನಿಲ್‌ಕುಮಾರ್, ರಂಗಸ್ವಾಮಿ, ಶಿವಣ್ಣ, ದೊರೆಬೈಯಣ್ಣ, ಶಮೀವುಲ್ಲಾ, ನಾಗರಾಜು, ಚಿನ್ನಯ್ಯ, ಉಮೇಶ್, ಬೊಮ್ಮಣ್ಣ ಮುಂತಾದವರು ಉಪಸ್ಥಿತರಿದ್ದರು.



ಚಳ್ಳಕೆರೆ ತಾಲ್ಲೂಕಿನ ಪರಶುರಾಮಪುರ ಹೋಬಳಿಯನ್ನು ತಾಲ್ಲೂಕು ಕೇಂದ್ರವನ್ನಾಗಿ ಘೋಷಿಸಬೇಕೆಂದು ನವಜಾಗೃತಿ ಯುವ ವೇದಿಕೆ ಜಿಲ್ಲಾಧ್ಯಕ್ಷ ಪಿಲ್ಲಹಳ್ಳಿ ಚಿತ್ರಲಿಂಗಪ್ಪ, ಯಾದಲಗಟ್ಟೆ ಜಗನ್ನಾಥ, ಪಿ.ಎಸ್.ಸುರೇಶ್ ಅಪರ ಜಿಲ್ಲಾಧಿಕಾರಿ ಕುಮಾರಸ್ವಾಮಿಯವರಿಗೆ ಮನವಿ ನೀಡಿ ಒತ್ತಾಯಿಸಿದರು.



ಚಳ್ಳಕೆರೆ ತಾಲ್ಲೂಕಿನ ನಗರಂಗೆರೆ ಗ್ರಾಮ ಪಂಚಾಯಿತಿ ಅಧ್ಯಕ್ಷರಾಗಿ ನಾಗವೇಣಮ್ಮಕರಿಯಣ್ಣ, ಉಪಾಧ್ಯಕ್ಷರಾಗಿ ಓಬಣ್ಣ ಆಯ್ಕೆಯಾದರು. ತಹಶೀಲ್ದಾರ್ ರೇಹಾನ್ ಪಾಷ, ಪಿಡಿಒ ಎಂ.ರಾಮಂಚದ್ರಪ್ಪ, ಸದಸ್ಯರಾದ ಕುಮಾರಸ್ವಾಮಿ, ಪಾತಲಿಂಗಪ್ಪ, ಶಿವಲಿಂಗಮ್ಮ, ಎನ್.ಮಂಜುನಾಥ, ಹಿದಾಯಿತ್‌ವುಲ್ಲಾ, ಅಂಗಡಿರಮೇಶ್, ಡಿ.ರಾಜು, ಮಂಗಳಮ್ಮ, ಗೌರಮ್ಮ, ರೇಣುಕಮ್ಮ, ಲಕ್ಷ್ಮಕ್ಕ, ಷಣ್ಮುಖಪ್ಪ, ನವೀನ್‌ಕುಮಾರ್, ಮಂಜಣ್ಣ, ಗದ್ದಿಗೆ ತಿಪ್ಪೇಸ್ವಾಮಿ, ಮಂಜುಮ್ಮ ಇದ್ದರು.

# ನೀರು ಮತ್ತು ಸ್ವಚ್ಛತೆ ಕುರಿತು ಜನಜಾಗೃತಿ ಸಪ್ತಾಹ - ದಿವ್ಯಪ್ರಭು

**ಚಿತ್ರದುರ್ಗ :** ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ ಸಹಯೋಗದಲ್ಲಿ ವಿವಿಧ ಇಲಾಖೆಗಳ ಸಕ್ರಿಯ ಪಾಲ್ಗೊಳ್ಳುವಿಕೆಯೊಂದಿಗೆ ಜಿಲ್ಲೆಯ ಜನರಲ್ಲಿ ಶುದ್ಧ ಕುಡಿಯುವ ನೀರು ಮತ್ತು ವೈಯಕ್ತಿಕ ಸ್ವಚ್ಛತೆ ಹಾಗೂ ನೈರ್ಮಲ್ಯ ಪಾಲನೆ ಕುರಿತು ಅರಿವು ಮೂಡಿಸಲು ಜಿಲ್ಲೆಯಾದ್ಯಂತ ಆ. 14 ರಿಂದ ಒಂದು ವಾರಗಳ ಕಾಲ "ಜನಜಾಗೃತಿ ಸಪ್ತಾಹ" ಆಚರಿಸಲಾಗುವುದು ಎಂದು ಜಿಲ್ಲಾಧಿಕಾರಿ ದಿವ್ಯಪ್ರಭು ಜಿ.ಆರ್.ಜೆ. ತಿಳಿಸಿದ್ದಾರೆ.

ಜಿಲ್ಲೆಯ ಜನರಲ್ಲಿ ಶುದ್ಧ ಕುಡಿಯುವ ನೀರು ಮತ್ತು ಸ್ವಚ್ಛತೆ ಕುರಿತಂತೆ ಅರಿವು ಮೂಡಿಸುವ ನಿಟ್ಟಿನಲ್ಲಿ ಕೈಗೊಳ್ಳಬೇಕಾದ ಕಾರ್ಯಕ್ರಮಗಳ ಕುರಿತು ಸಿದ್ಧತೆ ಕೈಗೊಳ್ಳಲು ಜಿಲ್ಲಾಧಿಕಾರಿಗಳ ಗೃಹ ಕಚೇರಿಯಲ್ಲಿ ಏರ್ಪಡಿಸಲಾದ ಪೂರ್ವಭಾವಿ ಸಭೆಯಲ್ಲಿ ಭಾಗವಹಿಸಿ ಅವರು ಮಾತನಾಡಿದರು.

ಇತ್ತೀಚೆಗೆ ಕವಾಡಿಗರ ಹಟ್ಟಿಯಲ್ಲಿ ಕಲುಷಿತ ನೀರಿನಿಂದ ಸಂಭವಿಸಿದ ಅಹಿತಕರ ಘಟನೆಗಳು ಜಿಲ್ಲೆಯಲ್ಲಿ ಮರುಕಳಿಸದಂತೆ ಮಾಡಲು, ಜನರ ಗಮನವನ್ನು ಸೆಳೆದು ಅವರಲ್ಲಿ ಅರಿವು ಮೂಡಿಸುವುದು, ಸಾರ್ವಜನಿಕರಲ್ಲಿನ ಆತಂಕ ನಿವಾರಿಸುವುದು ಹಾಗೂ ಆರೋಗ್ಯ ಶಿಕ್ಷಣ ನೀಡುವುದು ಪರಿಣಾಮಕಾರಿ ಕ್ರಮವಾಗಿದೆ. ಈ ನಿಟ್ಟಿನಲ್ಲಿ ಆ. 14 ರಿಂದ ಜನಜಾಗೃತಿ ಸಪ್ತಾಹ ಆಚರಿಸಲಾಗುತ್ತಿದ್ದು, ಕಾರ್ಯಕ್ರಮಕ್ಕೆ ಆ. 14 ರಂದು ಬೆಳಿಗ್ಗೆ 10 ಗಂಟೆಗೆ ನಗರದ ಓಬವ್ವ ವೃತ್ತದ ಬಳಿಯಿಂದಲೇ ವಿಶೇಷ ಅಭಿಯಾನಕ್ಕೆ ಚಾಲನೆ ನೀಡಲಾಗುವುದು ಎಂದರು. ಅಭಿಯಾನವು ಅಂದು ನಗರದ ಎಲ್ಲ 35 ವಾರ್ಡ್‌ಗಳಲ್ಲಿಯೂ ಏಕಕಾಲಕ್ಕೆ ಜರುಗಲಿದೆ.



**ನೀರು ಬಳಕೆಯ ಆತಂಕ ಬೇಡ :** ಚಿತ್ರದುರ್ಗ ನಗರ ಸೇರಿದಂತೆ ಜಿಲ್ಲೆಯ ವಿವಿಧ ಪ್ರದೇಶಗಳಿಗೆ ವಾಣಿವಿಲಾಸ ಜಲಾಶಯದ ನೀರು ಹಾಗೂ ಶಾಂತಿಸಾಗರದ ನೀರು ಬಳಕೆ ಮಾಡಲಾಗುತ್ತಿದೆ. ಆದರೆ ಜನರಿಗೆ ಈ ನೀರು ಪೂರೈಕೆ ಮಾಡುವುದಕ್ಕೂ ಮುನ್ನ ಅಗತ್ಯ ಪ್ರಕ್ರಿಯೆಗಳ ಮೂಲಕ ಶುದ್ಧೀಕರಿಸಿದ ಬಳಿಕವೇ ನಳದ ಮೂಲಕ ನೀರು ಪೂರೈಕೆ ಮಾಡಲಾಗುವುದು. ಹೀಗಾಗಿ ಯಾವುದೇ ವದಂತಿಗಳನ್ನು ಸಾರ್ವಜನಿಕರು ನಂಬಬಾರದು, ಯಾರೂ ಕೂಡ ಆತಂಕ ಪಡುವ ಅಗತ್ಯವಿಲ್ಲ. ಆದರೆ ಸಾರ್ವಜನಿಕರು ಕುದಿಸಿ, ಆರಿಸಿದ ನೀರನ್ನು ಬಳಸಬೇಕು.

**ಆ. 14 ಕ್ಕೆ ಜಾಗೃತಿ ಸಪ್ತಾಹಕ್ಕೆ ಚಾಲನೆ :** ಜನಜಾಗೃತಿ ಸಪ್ತಾಹದ ಅಂಗವಾಗಿ ವಿವಿಧ ಬಗೆಯ ವೈವಿಧ್ಯಮಯ ಚಟುವಟಿಕೆಗಳನ್ನು ಒಂದು ವಾರಗಳ ಕಾಲ ಆಯೋಜಿಸಲಾಗುವುದು. ಆಗಸ್ಟ್ 14 ರಂದು ಬೆಳಿಗ್ಗೆ 10 ಗಂಟೆಗೆ ಜಿಲ್ಲಾಧಿಕಾರಿಗಳ ಕಚೇರಿ ಬಳಿಯ ಓಬವ್ವ ವೃತ್ತದಿಂದ ಜಾಥಾ ಏರ್ಪಡಿಸುವ ಮೂಲಕ ಈ ಜಾಗೃತಿ ಸಪ್ತಾಹಕ್ಕೆ ಚಾಲನೆ ನೀಡಲಾಗುವುದು. ಈ ಸಂದರ್ಭದಲ್ಲಿ ನಗರದ ವ್ಯಾಪ್ತಿಯ ಶಾಲಾ ಕಾಲೇಜುಗಳ ವಿದ್ಯಾರ್ಥಿಗಳು, ನರ್ಸಿಂಗ್ ವಿದ್ಯಾರ್ಥಿಗಳು, ಆಶಾ ಕಾರ್ಯಕರ್ತೆಯರು, ಸ್ವ ಸಹಾಯ ಗುಂಪುಗಳ ಸದಸ್ಯರು, ಅಂಗನವಾಡಿ ಸಹಾಯಕರು ಸೇರಿದಂತೆ ಸಾವಿರಾರು ಜನ ಜಾಥಾ ಕಾರ್ಯಕ್ರಮದಲ್ಲಿ ಪಾಲ್ಗೊಳ್ಳುವರು.

**ಜಿಲ್ಲೆಯಾದ್ಯಂತ ವೈವಿಧ್ಯಮಯ ಚಟುವಟಿಕೆಗಳ ಆಯೋಜನೆ :** ಜನಜಾಗೃತಿ ಸಪ್ತಾಹ ಆಚರಣೆಯ ಅಂಗವಾಗಿ ಆಗಸ್ಟ್ 14 ರಿಂದ 20 ರವರೆಗೆ ನಗರ, ಪಟ್ಟಣ, ಗ್ರಾಮೀಣ ಪ್ರದೇಶಗಳಲ್ಲಿ ವೈವಿಧ್ಯಮಯ ಚಟುವಟಿಕೆಗಳನ್ನು ಹಮ್ಮಿಕೊಳ್ಳಲಾಗಿದ್ದು, ಶಾಲಾ ಮಕ್ಕಳಿಂದ ಪ್ರಭಾತ ಫೇರಿ, ಕಾಲ್ನಡಿಗೆ ಜಾಥಾ, ಜಾಗೃತಿ ಸಂದೇಶಗಳ ಭಿತ್ತಿಪತ್ರಗಳ ಪ್ರದರ್ಶನ, ಕರಪತ್ರಗಳ ಹಂಚಿಕೆ, ಬೀದಿ ನಾಟಕಗಳ ಪ್ರದರ್ಶನ, ಕಸ ವಿಲೇವಾರಿ ವಾಹನಗಳಲ್ಲಿ ಧನಿವರ್ಧಕಗಳ ಮೂಲಕ ಜಾಗೃತಿ ಸಂದೇಶಗಳು, ಗ್ರಾಮ ಪಂಚಾಯತಿಗಳಲ್ಲಿ ವಿಶೇಷ ಗ್ರಾಮ ಸಭೆಗಳನ್ನು ಆಯೋಜಿಸಿ, ಗ್ರಾಮಸ್ಥರಲ್ಲಿ ನೀರು ಹಾಗೂ ನೈರ್ಮಲ್ಯದ ಮಹತ್ವ ಕುರಿತು ಮನವರಿಕೆ ಮಾಡಿಕೊಡುವುದು, ಸ್ತ್ರೀಶಕ್ತಿ ಮತ್ತು ಮಹಿಳಾ ಸ್ವ ಸಹಾಯ ಗುಂಪುಗಳ ಮೂಲಕ ಮಹಿಳೆಯರಲ್ಲಿ ಜಾಗೃತಿ ಮೂಡಿಸುವುದು, ವೈಯಕ್ತಿಕ ಸ್ವಚ್ಛತೆ ಕುರಿತು ಜಿಲ್ಲೆಯಾದ್ಯಂತ ಆರೋಗ್ಯ ಇಲಾಖೆಯಿಂದ ಪ್ರಾತ್ಯಕ್ಷಿಕೆಗಳ ಆಯೋಜನೆ, ಶಾಲೆಗಳಲ್ಲಿ ಬೆಳಗಿನ ಪ್ರಾರ್ಥನೆ ಸಂದರ್ಭದಲ್ಲಿ ಮಕ್ಕಳಲ್ಲಿ ಕುಡಿಯುವ ನೀರು ಮತ್ತು ಸ್ವಚ್ಛತೆ ಕಾಪಾಡಿಕೊಳ್ಳುವ ಬಗ್ಗೆ ತಿಳುವಳಿಕೆ ನೀಡುವುದು, ಜಿಲ್ಲೆಯಾದ್ಯಂತ ಸಂಜೆಯ ವೇಳೆ ಪಂಜಿನ ಮೆರವಣಿಗೆ ಏರ್ಪಡಿಸಿ ಜನರ ಗಮನ ಸೆಳೆದು ಧ್ವನಿವರ್ಧಕ ಮೂಲಕ ಅವರಿಗೆ ಜಾಗೃತಿಯ ಸಂದೇಶ ನೀಡುವುದು.

ಸಭೆಯಲ್ಲಿ ಅಪರ ಜಿಲ್ಲಾಧಿಕಾರಿ ಬಿ.ಟಿ. ಕುಮಾರಸ್ವಾಮಿ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ. ರಂಗನಾಥ್, ಡಿಡಿಪಿಐ ರವಿಶಂಕರ ರೆಡ್ಡಿ, ಬಿಇಒ ನಾಗಭೂಷಣ್, ನಗರಾಭಿವೃದ್ಧಿ ಕೋಶದ ಯೋಜನಾ ನಿರ್ದೇಶಕ ಮಹೇಂದ್ರಕುಮಾರ್, ನಗರಸಭೆ ಪೌರಾಯುಕ್ತ ಶ್ರೀನಿವಾಸ್, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕ ಮಲ್ಲಿಕಾರ್ಜುನ್ ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು ಉಪಸ್ಥಿತರಿದ್ದರು.

# ಕಾಂಗ್ರೆಸ್‌ನಲ್ಲಿ ಹೊಸದಾಗಿ ಸಾಮಾಜಿನ ನ್ಯಾಯ ಘಟಕ

**ಚಿತ್ರದುರ್ಗ :** ಕಾಂಗ್ರೆಸ್‌ನಲ್ಲಿ ಹೊಸದಾಗಿ ಆರಂಭಗೊಂಡಿರುವ ಸಾಮಾಜಿನ ನ್ಯಾಯ ಘಟಕಕ್ಕೆ ಸಣ್ಣ ಸಣ್ಣ ಸಮುದಾಯಗಳನ್ನು ಸೇರಿಸಿಕೊಂಡು ಜಿಲ್ಲಾ ಮತ್ತು ಬ್ಲಾಕ್ ಕಮಿಟಿಗಳನ್ನು ರಚಿಸುವಂತೆ ಕರ್ನಾಟಕ ಪ್ರದೇಶ ಕಾಂಗ್ರೆಸ್ ಸಮಿತಿ ಸಾಮಾಜಿಕ ನ್ಯಾಯ ಘಟಕದ ರಾಜ್ಯಾಧ್ಯಕ್ಷ ಸಿ.ಎಸ್.ಧ್ವಾರಕನಾಥ್ ಸೂಚಿಸಿದರು.

ಜಿಲ್ಲಾ ಕಾಂಗ್ರೆಸ್ ಕಚೇರಿಗೆ ಶನಿವಾರ ಭೇಟಿ ನೀಡಿ ಕಾರ್ಯಕರ್ತರನ್ನುದ್ದೇಶಿಸಿ ಮಾತನಾಡಿದ ಅವರು ನೆಹರು ಕಾಲದಿಂದಲೂ ಕಾಂಗ್ರೆಸ್‌ನಲ್ಲಿ ಸಾಮಾಜಿಕ ನ್ಯಾಯದ ಪರಿಕಲ್ಪನೆಯಿದೆ. ಕೇಂದ್ರದಲ್ಲಿ ಬಿಜೆಪಿ. ಅಧಿಕಾರಕ್ಕೆ ಬಂದಾಗಿನಿಂದಲೂ ಆದಿವಾಸಿಗಳು, ದಲಿತರು, ಮಹಿಳೆಯರ ಮೇಲೆ ನಡೆಯುತ್ತಿರುವ ಅನ್ಯಾಯ ದಬ್ಬಾಳಿಕೆಯನ್ನು ನೋಡಿದಾಗ ಸಾಮಾಜಿಕ ನ್ಯಾಯ ಘಟಕ ಬೇಕು ಅನಿಸಿತು. ನಾಗಪುರದಲ್ಲಿರುವ ಆರ್.ಎಸ್.ಎಸ್.ಕಚೇರಿ ಪ್ರಧಾನಿ ಮೋದಿಯನ್ನು ಆಟ ಆಡಿಸುತ್ತಿರುವುದನ್ನು ಕಂಡಾಗ ಅವರಿಗೆ ಸ್ವಂತ ಬುದ್ದಿ ಇಲ್ಲ ಎನ್ನುವುದು ಗೊತ್ತಾಗುತ್ತದೆ. ಸಂವಿಧಾನದ ಮೇಲೆ ಧಾಳಿ ನಡೆಯುತ್ತಿದೆ. ತಳಸಮುದಾಯದ ಬಗ್ಗೆ ಗೌರವವಿಲ್ಲ. ಸ್ತ್ರೀ ಸಮಾನತೆ ಅವರಿಗೆ ಇಷ್ಟವಿಲ್ಲ. ಅದಕ್ಕಾಗಿ ಸಾಮಾಜಿಕ ನ್ಯಾಯ ಘಟಕ ಎಲ್ಲಾ ಜನಾಂಗದವರಿಗೆ ಸಾಮಾಜಿಕ ನ್ಯಾಯ ಒದಗಿಸುವ ಕೆಲಸ ಮಾಡುತ್ತಿದೆ ಎಂದು ಹೇಳಿದರು.

ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಇನ್ನು 45 ದಿನಗಳೊಳಗೆ ಸಾಮಾಜಿಕ ನ್ಯಾಯ ಘಟಕ ಆರಂಭವಾಗಬೇಕೆಂಬ ಆದೇಶ ನೀಡಿರುವುದರಿಂದ ರಾಜ್ಯಾದ್ಯಂತ ಎಲ್ಲಾ ಜಿಲ್ಲೆಗಳಿಗೆ ಭೇಟಿ ನೀಡುತ್ತಿದ್ದೇವೆ. ಯಾವುದೇ ಜಾತಿ ಬೇಧವಿಲ್ಲದ ಎಲ್ಲರೂ ಈ ಘಟಕ-ಕ್ಕೆ ಬರಬಹುದು. ಪಕ್ಷದಿಂದ ಹೊರಗಿರುವವರನ್ನು ಘಟಕಕ್ಕೆ ಸೆಳೆದುಕೊಂಡು

ಶೇ.50 ರಷ್ಟು ಮಹಿಳೆಯರನ್ನು ಕಡ್ಡಾಯವಾಗಿ ಘಟಕ-ಕ್ಕೆ ಸೇರಿಸಿಕೊಳ್ಳಬೇಕು ಎಂದು ಜಿಲ್ಲಾ ಕಾಂಗ್ರೆಸ್ ಅಧ್ಯಕ್ಷರಿಗೆ ತಿಳಿಸಿದರು.




**ಕಾಂಗ್ರೆಸ್ ಕಚೇರಿಗೆ ಭೇಟಿ ನೀಡಿ ಜಿಲ್ಲಾ ಮತ್ತು ಬ್ಲಾಕ್ ಹಂತದಲ್ಲಿ ಸಾಮಾಜಿಕ ನ್ಯಾಯ ಘಟಕ ರಚಿಸುವ ಕುರಿತು ಕೆ.ಪಿ.ಸಿ.ಸಿ. ಸಾಮಾಜಿಕ ನ್ಯಾಯ ಘಟಕದ ರಾಜ್ಯಾಧ್ಯಕ್ಷ ಸಿ.ಎಸ್.ಧ್ವಾರಕನಾಥ್ ಮಾತನಾಡಿದರು.**

ಸಾಮಾಜಿಕ ನ್ಯಾಯ ಸಮಿತಿ ಘಟಕದ ರಾಜ್ಯ ಪ್ರಧಾನ ಕಾರ್ಯದರ್ಶಿ ಚಮನ್ ಫರ್ಜಾನ ಮಾತನಾಡಿ ಕರ್ನಾಟಕ ಪ್ರದೇಶ ಕಾಂಗ್ರೆಸ್ ಸಮಿತಿಯಲ್ಲಿ ಹೊಸದಾಗಿ ಸಾಮಾಜಿಕ ನ್ಯಾಯ ಘಟಕ ಆರಂಭಗೊಂಡಿದೆ. ಯೂರೋಪ್‌ನಲ್ಲಿ ಸಾಮಾಜಿಕ ನ್ಯಾಯಕ್ಕಾಗಿ ಕ್ರಾಂತಿಯಾಯಿತು. ಬಡವ-ಶ್ರೀಮಂತ, ಮೇಲು-ಕೀಳು, ಲಿಂಗ ತಾರತಮ್ಯ ನಿವಾರಣೆಗಾಗಿ ಘರ್ಷಣೆ ಆರಂಭಗೊಂಡಾಗ ಸಾಮಾಜಿಕ ನ್ಯಾಯ ಒದಗಿಸುವುದು ಬಹಳ ಮುಖ್ಯ. ರಾಜಸ್ಥಾನದ ಉದಯಪುರ್‌ನಲ್ಲಿ ನಡೆದ ದೊಡ್ಡ ಚಿಂತನಾ ಶಿಬಿರದಲ್ಲಿ ರಾಹುಲ್‌ಗಾಂಧಿ ದೇಶಾದ್ಯಂತ ರಚನೆಯಾಗಬೇಕೆಂದು ಸೂಚಿಸಿದರು. ಹಾಗಾಗಿ ಈ ಘಟಕಕ್ಕೆ ಒತ್ತು ಕೊಡಬೇಕಿದೆ ಎಂದು ನುಡಿದರು.

ಕಾಂಗ್ರೆಸ್‌ಗೆ ಸಾಮಾಜಿಕ ನ್ಯಾಯದಲ್ಲಿ ಬದ್ದತೆಯಿದೆ. ಸಿ.ಎಸ್.ಧ್ವಾರಕನಾಥ್‌ರವರು ಹಿಂದುಳಿದ ವರ್ಗಗಳ ಆಯೋಗದ ಅಧ್ಯಕ್ಷರಾಗಿದ್ದಾಗ ಕೆಳವರ್ಗದ ಜನರ ಸ್ಥಿತಿಗತಿಯನ್ನು ಅಧ್ಯಯನ ನಡೆಸಿದ್ದಾರೆ. ಅಸಮಾನತೆ ದೇಶದಲ್ಲಿ ತಾಂಡವವಾಡುತ್ತಿದೆ. ಜಿಲ್ಲಾ ಸಮಿತಿ ರಚಿಸುವುದು ಸಾಮಾಜಿಕ ನ್ಯಾಯದ ಉದ್ದೇಶ. ಬ್ಲಾಕ್ ಹಂತದಲ್ಲಿಯೂ ಕೆಲಸ ಮಾಡಿ ಕಾಂಗ್ರೆಸ್ ಪಕ್ಷವನ್ನು ಸಂಘಟಿಸಬೇಕು ಎಂದು ಕರೆ ನೀಡಿದರು.

ಕರ್ನಾಟಕ ಪ್ರದೇಶ ಕಾಂಗ್ರೆಸ್ ಸಮಿತಿ ಸಾಮಾಜಿಕ ನ್ಯಾಯ ಘಟಕದ ಪ್ರಧಾನ ಕಾರ್ಯದರ್ಶಿ ನಾಗರಾಜ್, ರಾಜ್ಯ ಉಪಾಧ್ಯಕ್ಷೆ ಪದ್ಮ, ಜಿಲ್ಲಾ ಕಾಂಗ್ರೆಸ್ ಅಧ್ಯಕ್ಷ ಎಂ.ಕೆ.ತಾಜ್‌ಪೀರ್, ಪ್ರಧಾನ ಕಾರ್ಯದರ್ಶಿಗಳಾದ ಕೆ.ಪಿ.ಸಂಪತ್‌ಕುಮಾರ್, ಡಿ.ಎನ್.ಮೈಲಾರಪ್ಪ, ಉಪಾಧ್ಯಕ್ಷ ರವಿಕುಮಾರ್, ಕಾನೂನು ವಿಭಾಗದ ಅಧ್ಯಕ್ಷ ಸುದರ್ಶನ್, ಪದವೀಧರ ವಿಭಾಗದ ಅಧ್ಯಕ್ಷ ಮುದಸಿರ್‌ನವಾಜ್, ಕೆ.ಪಿ.ಸಿ.ಸಿ. ವಕ್ತಾರ ಬಾಲಕೃಷ್ಣಸ್ವಾಮಿ, ಇಂಟೆಕ್ ವಿಭಾಗದ ಅಧ್ಯಕ್ಷ ಅಶೋಕ್ ನಾಯ್ಡು, ಕುಶಲ ಕರ್ಮಿ ವಿಭಾಗದ ಪ್ರಸನ್ನಕುಮಾರ್ ವೇದಿಕೆಯಲ್ಲಿದ್ದರು.

ಅಲ್ಪಸಂಖ್ಯಾತ ವಿಭಾಗದ ಅಧ್ಯಕ್ಷ ಅಬ್ದುಲ್ಲಾ, ಸೈಯದ್ ಅಲ್ಲಾಭಕ್ಷಿ, ಚಾಂದ್‌ಪೀರ್, ಸೇವಾದಳದ ಇಂದಿರಾ ಇನ್ನು ಅನೇಕರು ಈ ಸಂದರ್ಭದಲ್ಲಿ ಹಾಜರಿದ್ದರು.

# ಶ್ರೀಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ದಿ ಯೋಜನೆ ಫುಡ್‌ಕಿಟ್‌ಗಳನ್ನು ವಿತರಣೆ

ಚಿತ್ರದುರ್ಗ : ಕವಾಡಿಗರಹಟ್ಟಿಯಲ್ಲಿ ಕಲುಷಿತ ನೀರು ಸೇವಿಸಿ ಐವರು ಮೃತಪಟ್ಟಿದ್ದು, ಇನ್ನೂರಕ್ಕೂ ಹೆಚ್ಚು ಮಂದಿ ಅಸ್ವಸ್ಥರಾಗಿರುವ ಪ್ರಕರಣಕ್ಕೆ ಸಂಬಂಧಿಸಿದಂತೆ ಶ್ರೀಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ದಿ ಯೋಜನೆ ವತಿಯಿಂದ ಭಾನುವಾರ ಕವಾಡಿಗರಹಟ್ಟಿಯಲ್ಲಿ 425 ಮಹಿಳೆಯರಿಗೆ ಫುಡ್‌ಕಿಟ್‌ಗಳನ್ನು ವಿತರಿಸಲಾಯಿತು.

ಶ್ರೀಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ದಿ ಯೋಜನೆ ಜಿಲ್ಲಾ ನಿರ್ದೇಶಕ ದಿನೇಶ್ ಪೂಜಾರಿ ಫುಡ್‌ಕಿಟ್‌ಗಳನ್ನು ವಿತರಿಸಿ ಮಾತನಾಡುತ್ತ ಕಳೆದ ಹನ್ನೆರಡು ವರ್ಷಗಳಿಂದಲೂ ಶ್ರೀಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ದಿ ಯೋಜನೆ ಅನೇಕ ಉಪಯುಕ್ತ ಕೆಲಸಗಳನ್ನು ಮಾಡಿಕೊಂಡು ಬರುತ್ತಿದೆ. ಧರ್ಮಸ್ಥಳದ ಧರ್ಮಾಧಿಕಾರಿ ಡಾ.ಡಿ.ವೀರೇಂದ್ರ ಹೆಗಡೆರವರ ಸೂಚನೆಯಂತೆ ಫುಡ್‌ಕಿಟ್‌ಗಳನ್ನು ನೀಡಿದ್ದೇವೆ. ಮನೆ ಹಾಗೂ ಸುತ್ತಮುತ್ತ ಪರಿಸರವನ್ನು ಸ್ವಚ್ಚವಾಗಿಟ್ಟುಕೊಳ್ಳುವ ಅರಿವು ಎಲ್ಲರಲ್ಲಿಯೂ ಮೂಡಬೇಕು. ಅದೇ ರೀತಿ ಕಾಯಿಸಿ ನೀರು ಕುಡಿಯುವುದು ಒಳ್ಳೆಯದು. ಯಾವುದೇ ವದಂತಿಗಳಿಗೆ ಕಿವಿಗೊಡಬೇಡಿ ಎಂದು ಮನವಿ ಮಾಡಿದರು.



**ಶ್ರೀಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ದಿ ಯೋಜನೆಯಿಂದ ಕವಾಡಿಗರಹಟ್ಟಿಯಲ್ಲಿ 425 ಮಹಿಳೆಯರಿಗೆ ಫುಡ್‌ಕಿಟ್‌ಗಳ ವಿತರಣೆ.**

ಸ್ವ-ಸಹಾಯ ಸಂಘದ ಮಹಿಳೆಯರು ಪಡೆದಿರುವ ಸಾಲವನ್ನು ಮನ್ನಾ ಮಾಡುವಂತೆ ಕೇಳುತ್ತಿರುವುದು ಸರಿಯಲ್ಲ. ಪಡೆದ ಸಾಲವನ್ನು ಮರು ಪಾವತಿ ಮಾಡಿರುವವರಲ್ಲಿ ಕವಾಡಿಗರಹಟ್ಟಿಯ ಮಹಿಳೆಯರು ಪ್ರಥಮ ಎಂದು ಶ್ಲಾಘಿಸಿದ ದಿನೇಶ್ ಪೂಜಾರಿ ಶ್ರೀ-ಕ್ಷೇತ್ರ ಧರ್ಮಸ್ಥಳದಿಂದ ಯಾರಿಗೂ ಸಾಲ ಕೊಡುವುದಿಲ್ಲ. ಅದಕ್ಕೆ ಬದಲಾಗಿ ನಿಮಗೆ ಸಾಲ ನೀಡುವಂತೆ ಡಾ.ಡಿ.ವೀರೇಂದ್ರ ಹೆಗಡೆರವರು ಬ್ಯಾಂಕಿಗೆ ಶಿಫಾರಸ್ಸು ಮಾಡುತ್ತಾರೆನ್ನುವುದು ನಿಮಗೆ ಗೊತ್ತಿರಲಿ ಎಂದರು.

ಜಿಲ್ಲಾ ಜನಜಾಗೃತಿ ವೇದಿಕೆ ಸದಸ್ಯ ನಾಗರಾಜ್ ಸಂಗಂ ಮಾತನಾಡಿ ಕವಾಡಿಗರಹಟ್ಟಿಯಲ್ಲಿ ಕಲುಷಿತ ನೀರು ಸೇವಿಸಿ ಐವರು ಬಲಿಯಾಗಿದ್ದು, ಇನ್ನೂರಕ್ಕೂ ಹೆಚ್ಚು ಮಂದಿ ಅಸ್ವಸ್ಥರಾಗಿರುವುದಕ್ಕೆ ನೀರಿನಲ್ಲಿ ವಿಷಕಾರಕ ಅಂಶ ಬೆರೆಸಲಾಗಿದೆ ಎನ್ನುವ ವದಂತಿಯನ್ನು ಯಾರು ನಂಬಬೇಡಿ. ಮನೆಯ ಮುಂದೆ ಚರಂಡಿಯನ್ನು ಸ್ವಚ್ಚವಾಗಿಟ್ಟುಕೊಳ್ಳಿ, ಖಾಲಿ ನಿವೇಶನಗಳಲ್ಲಿ ಪೊದೆಯಂತೆ ಗಿಡಗಳನ್ನು ಬೆಳೆಸಿಕೊಳ್ಳಬಾರದು, ಶೌಚಕ್ಕೆ ಹೋಗಿ ಬಂದಾಗ ಕೈಯನ್ನು ಸೋಪುಗಳಿಂದ ತೊಳೆಯಬೇಕು. ಇದರಿಂದ ವೈಯಕ್ತಿಕ ಸ್ವಚ್ಚತೆ ಕಾಪಾಡಿಕೊಂಡಂತಾಗುತ್ತದೆಂದು ದಲಿತ ಕಾಲೋನಿಯ ಮಹಿಳೆಯರಿಗೆ ಕಿವಿಮಾತು ಹೇಳಿದರು.

ಜಿಲ್ಲಾ ಜನಜಾಗೃತಿ ವೇದಿಕೆ ಉಪಾಧ್ಯಕ್ಷ ಕೆ.ಆರ್.ಮಂಜುನಾಥ್ ಮಾತನಾಡಿ ನಿಮ್ಮ ನಿಮ್ಮ ಆರೋಗ್ಯಕ್ಕೆ ನೀವೆ ಜವಾಬ್ದಾರರು. ಎಲ್ಲಾ ಕೆಲಸವನ್ನು ಸರ್ಕಾರದಿಂದಲೆ ನಿರೀಕ್ಷಿಸುವುದು ಸರಿಯಲ್ಲ. ಗ್ರಾಮೀಣ ಭಾಗಗಳಲ್ಲಿ ಮಹಿಳೆಯರು ಸ್ವಾವಲಂಭಿಗಳಾಗಿ ಬದುಕಲು ಶ್ರೀಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ದಿ ಯೋಜನೆ ಹತ್ತು ಹಲವಾರು ಕಾರ್ಯಕ್ರಮಗಳನ್ನು ನಡೆಸಿಕೊಂಡು ಬರುತ್ತಿದೆ. ಕವಾಡಿಗರಹಟ್ಟಿಯಲ್ಲಿ ಕಹಿ ಘಟನೆ ನಡೆದಿದೆ. ಇನ್ನು ಮುಂದಾದರೂ ನೀವುಗಳು ಪರಿಸರವನ್ನು ಶುದ್ದವಾಗಿಟ್ಟುಕೊಳ್ಳುವುದನ್ನು ಕಲಿಯಿರಿ ಎಂದು ತಾಕೀತು ಮಾಡಿದರು.

ಜಿಲ್ಲಾ ಜನಜಾಗೃತಿ ವೇದಿಕೆ ಸದಸ್ಯೆ ಶ್ರೀಮತಿ ರೂಪ ಜನಾರ್ಧನ್ ಮಾತನಾಡುತ್ತ ನಿಮ್ಮ ಸುರಕ್ಷತೆಗೆ ನೀವೆ ಜವಾಬ್ದಾರರು. ಕುಡಿಯುವ ನೀರಿನಲ್ಲಿ ವಿಷಕಾರಕ ಅಂಶವಿದೆ ಎನ್ನುವ ವದಂತಿ ಹರಡುವವರ ವಿರುದ್ದ ಎಚ್ಚರವಾಗಿರಿ. ಶ್ರೀಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ದಿ ಯೋಜನೆ ಸದಾ ನಿಮ್ಮ ಪರವಾಗಿರುತ್ತದೆ. ಹೆಚ್ಚು ಗಿಡ-ಮರವನ್ನು ಬೆಳೆಸಿ ಪರಿಸರವನ್ನು ಹೇಗೆ ಕಾಪಾಡುತ್ತಿರೋ ಅಷ್ಟು ನಿಮಗೆ ಉಪಯೋಗ ಎಂದು ತಿಳಿಸಿದರು. ತಾಲ್ಲೂಕು ಯೋಜನಾಧಿಕಾರಿ ಬಿ.ಅಶೋಕ್, ಜ್ಞಾನವಿಕಾಸ ಸಮನ್ವಯಾಧಿಕಾರಿ ಸುಧ ಈ ಸಂದರ್ಭದಲ್ಲಿ ಉಪಸ್ಥಿತರಿದ್ದರು.

Printed by: GOVINDAPPA.T Published by: DARSHAN.T Owned by: DARSHAN.T and Printed at: ASHAYA PRINTERS No.94, C.M.C. Colony, Yangammana Katte, Chitradurga-577 501, Chitradurga Dist, Karnataka state. Published at : No. 55 Ingaladal Main Street, Near Canara Banak , Ingaladal Village, Ingaladal Post - 577524, Chitradurga Tq, Chitradurga Dist, Karnataka state. Editor : DARSHAN.T